ವಿಜಯಪುರ | ಸಂಪುಟ 04 | ಸಂಚಿಕೆ 134 | ಪುಟ 04 | ₹ 3.00

https://udayarashminews.com

udayarashmi 90088 88340

# ಉದಯ ರಶ್ಮಿ

Udayarashmi Kannada Daily

ಜನಪರ-ಜೀವಪರ


ಕನ್ನಡ ದಿನಪತ್ರಿಕೆ

ಸಂಪಾದಕ : ಇಂದುಶೇಖರ ಮಣೂರ

Editor: Indushekhar Manur

editor.udayarashmi@gmail.com RNI NO: KARKAN/2023/86203 ಶುಕ್ರವಾರ, ಜುಲೈ, 17, 2026

" ಕಾಂಗ್ರೆಸ್ ಸರ್ಕಾರ ರೈತರಿಗೆ ನೀಡಿದ್ದ ಭರವಸೆಗಳನ್ನು ಈಡೇರಿಸದೆ ನಂಬಿಕೆ ದ್ರೋಹ ಮಾಡಿದೆ. ಮಳೆ ಹಾನಿಯಿಂದ ಸಂಕಷ್ಟಕ್ಕೆ ಸಿಲುಕಿರುವ ರೈತರಿಗೆ ತಕ್ಷಣವೇ ಪ್ರತಿ ಹೆಕ್ಟರ್‌ಗೆ ರೂ.50 ಸಾವಿರ ಬೆಳೆ ಪರಿಹಾರ ನೀಡಬೇಕು."



■ ರಮೇಶ ಭೂಸನೂರ
ಮಾಜಿ ಶಾಸಕರು, ಸಿಂದಗಿ

## ವಿಧಾನಸೌಧದಲ್ಲಿ ಸಚಿವರಾದ ರಾಮಲಿಂಗಾರೆಡ್ಡಿ ಮತ್ತು ಎಂ.ಬಿ.ಪಾಟೀಲ ನೇತೃತ್ವದಲ್ಲಿ ಸಣ್ಣ ನೀರಾವರಿ ಮತ್ತು ಕೃಷ್ಣಾ ಭಾಗ್ಯ ಜಲ ನಿಗಮದ ಅಧಿಕಾರಿಗಳ ಜತೆ ಸಭೆ | ಸಂಪುಟಕ್ಕೆ ವಿಷಯ ಮಂಡನೆ

# ಮಮದಾಪುರ ಕೆರೆ ಮುಳುಗಡೆ ಪ್ರದೇಶ ಸ್ವಾಧೀನಕ್ಕೆ ತೀರ್ಮಾನ

■ ಉದಯರಶ್ಮಿ ದಿನಪತ್ರಿಕೆ



ಬೆಂಗಳೂರು: ವಿಜಯಪುರ ಜಿಲ್ಲೆ, ಬಬಲೇಶ್ವರ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಮಮದಾಪುರ ಕೆರೆಯಲ್ಲಿ ನೀರು ತುಂಬಿದಾಗ ಮುಳುಗಡೆ ಆಗುವ 178 ಎಕರೆ ಜಮೀನನ್ನು ರೈತರ ಕೋರಿಕೆಯ ಮೇರೆಗೆ ಭೂಸ್ವಾಧೀನಕ್ಕೆ ಸಕಾರಾತ್ಮಕ ತೀರ್ಮಾನವಾಗಿದ್ದು ಈ ವಿಷಯವನ್ನು ಸಂಪುಟದ ಮುಂದೆ ತರಲು ಜಲಸಂಪನ್ಮೂಲ ಸಚಿವ ರಾಮಲಿಂಗಾರೆಡ್ಡಿ ಅವರು ಅಧಿಕಾರಿಗಳಿಗೆ ಸೂಚಿಸಿದರು.

ಈ ಸಂಬಂಧವಾಗಿ ಗುರುವಾರ ಜಲಸಂಪನ್ಮೂಲ ಸಚಿವ ರಾಮಲಿಂಗಾರೆಡ್ಡಿ ಮತ್ತು ಎಂ ಬಿ ಪಾಟೀಲ ಇಬ್ಬರೂ ವಿಧಾನಸೌಧದಲ್ಲಿ ಸಣ್ಣ ನೀರಾವರಿ ಮತ್ತು ಕೃಷ್ಣಾ ಭಾಗ್ಯ ಜಲ ನಿಗಮದ ಅಧಿಕಾರಿಗಳ ಜತೆ ಸಭೆ ನಡೆಸಿದರು.

ಮುಳುಗಡೆ ಪ್ರದೇಶದ ರೈತರಿಗೆ ಆಗುತ್ತಿರುವ ಅನಾನುಕೂಲ ಮತ್ತು ನಷ್ಟ ತಪ್ಪಿಸಲು ಸ್ವಾಧೀನದ ಅಗತ್ಯ ಇದ್ದು, ಆದಷ್ಟು ಬೇಗ ಈ ಕುರಿತು ಸಂಪುಟದಲ್ಲಿ ಚರ್ಚಿಸಿ ಸೂಕ್ತ ತೀರ್ಮಾನ ಮಾಡಲಾಗುವುದು ಎಂದು ಹೇಳಿದರು.

ಕ್ಷೇತ್ರದ ಶಾಸಕರೂ ಆದ ಸಚಿವ ಪಾಟೀಲ ಅವರು ಮಾತನಾಡಿ, '16ನೇ ಶತಮಾನದಲ್ಲಿ ಆದಿಲ್ ಶಾಹಿಗಳು ಕಟ್ಟಿಸಿದ ಮಮದಾಪೂರ ಕೆರೆ 1,200 ಎಕರೆ ವಿಶಾಲವಾಗಿದ್ದು, 15 ಹಳ್ಳಿಗಳಿಗೆ ಆಸರೆಯಾಗಿದೆ. ಕೃಷ್ಣಾ ಮೇಲ್ದಂಡೆ ಯೋಜನೆಯಿಂದ ಇದಕ್ಕೆ ನೀರು ತುಂಬಿಸಲಾಗುತ್ತದೆ. ಹೀಗಾದಾಗ 42 ರೈತರಿಗೆ ಸೇರಿರುವ



178 ಎಕರೆ ಮುಳುಗಡೆಯಾಗಿ ಅಲ್ಲಿ ಏನನ್ನೂ ಬೆಳೆಯಲು ಆಗುತ್ತಿಲ್ಲ ಎಂದಿದ್ದಾರೆ.

ಹೀಗಾಗಿ ರೈತರು ಇಷ್ಟು ಜಮೀನನ್ನು ಕೃಷ್ಣಾ ಭಾಗ್ಯ ಜಲ ನಿಗಮದ ಸ್ವಾಧೀನಕ್ಕೆ ತೆಗೆದುಕೊಳ್ಳಲು ಕೋರುತ್ತಿದ್ದರು. ಇದಕ್ಕೆ 42 ಕೋಟಿ ರೂಪಾಯಿ ವೆಚ್ಚವಾಗಲಿದ್ದು ಅದಕ್ಕೆ ಹಣ ಬಿಡುಗಡೆ ಮಾಡುವಂತೆ ಕೋರುವ ಉದ್ದೇಶದಿಂದ ಈ ಸಭೆ ನಡೆಸಲಾಯಿತು.

ಜಲಸಂಪನ್ಮೂಲ ಸಚಿವರ ಕಚೇರಿಯಲ್ಲಿ ನಡೆದ ಸಭೆಯಲ್ಲಿ ಜಲಸಂಪನ್ಮೂಲ ಇಲಾಖೆಯ ಹೆಚ್ಚುವರಿ ಮುಖ್ಯ ಕಾರ್ಯದರ್ಶಿ ಗೌರವ್ ಗುಪ್ತ, ಕೃಷ್ಣಾ ಭಾಗ್ಯ ಜಲ ನಿಗಮದ ಪ್ರಧಾನ ವ್ಯವಸ್ಥಾಪಕ ಬಿ ಎಂ ಕುಲಕರ್ಣಿ, ಸಣ್ಣ ನೀರಾವರಿ ಇಲಾಖೆ ಕಾರ್ಯದರ್ಶಿ ಬಿ.ಕೆ.ಪವಿತ್ರಾ ಸೇ-ರಿದಂತೆ ಇತರ ಅಧಿಕಾರಿಗಳು ಸಭೆಯಲ್ಲಿ ಭಾಗವಹಿಸಿದ್ದರು.



## ವಿಜಯಪುರ ದಲ್ಲಿ ವಿಶ್ವ ಹಾವುಗಳ ದಿನವನ್ನು ಉದ್ಘಾಟಿಸಿದ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಲಕ್ಷ್ಮಣ ನಿಂಬರಗಿ ಸಲಹೆ

# ಹಾವುಗಳ ಬಗ್ಗೆ ಇರುವ ಮೂಢ ನಂಬಿಕೆ ತೊರೆದು ಅವುಗಳನ್ನು ರಕ್ಷಿಸಿ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ವಿದ್ಯಾರ್ಥಿಗಳಿಗೆ ಹಾವುಗಳ ಕುರಿತು ಜಾಗೃತಿ ಮತ್ತು ಹಾವು ರಕ್ಷಕರಿಗೆ ಸ್ನೇಕ್ ಕ್ಯಾಚಿಂಗ್ ಕಿಟ್ ಹಾಗೂ ಆರೋಗ್ಯ ಕಾರ್ಡ್ ವಿತರಿಸುವ ಮೂಲಕ ವಿಶ್ವ ಹಾವುಗಳ ದಿನವನ್ನು ನಗರದಲ್ಲಿ ವಿನೂತನ ಮತ್ತು ಅರ್ಥಪೂರ್ಣವಾಗಿ ಆಚರಿಸಲಾಯಿತು.

ಗುರುವಾರ ನಗರದ ಬಿ.ಎಲ್.ಡಿ.ಇ ಸಂಸ್ಥೆಯ ವಚನಪಿತಾಮಹ ಡಾ. ಫ. ಗು. ಹಳಕಟ್ಟಿ ಎಂಜನಿಯರಿಂಗ್ ಕಾಲೇಜಿನಲ್ಲಿ ಬಿ.ಎಲ್.ಡಿ.ಇ ಡೀಮ್ಡ್ ವಿಶ್ವವಿದ್ಯಾಲಯ ಮತ್ತು ವಿಜಯಪುರ ಅರಣ್ಯ ಇಲಾಖೆ ಸಹಯೋಗದಲ್ಲಿ ನಡೆದ ಈ ಕಾರ್ಯಕ್ರಮವನ್ನು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಲಕ್ಷ್ಮಣ ನಿಂಬರಗಿ ಉದ್ಘಾಟಿಸಿದರು.

ಬಳಿಕ ಮಾತನಾಡಿದ ಅವರು, ಹಾವುಗಳ ಬಗ್ಗೆ ಇರುವ ಮೂಢ ನಂಬಿಕೆಗಳನ್ನು ತೊರೆದು ಅವುಗಳನ್ನು ರಕ್ಷಿಸುವ ಮೂಲಕ ವೈಜ್ಞಾನಿಕ ಮನೋಭಾವ ಬೆಳೆಸಿಕೊಳ್ಳಬೇಕು. ಪರಿಸರ ಸಂರಕ್ಷಣೆ ಪ್ರತಿಯೊಬ್ಬರ ಜವಾಬ್ದಾರಿಯಾಗಿದ್ದು, ಈ ಬಗ್ಗೆ ಜಾಗೃತಿ ಮೂಡಿಸಬೇಕು ಎಂದು ಹೇಳಿದರು.

ಬೆಳಗಾವಿ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ ಮಂಜುನಾಥ ಚವ್ಹಾಣ ಮಾತನಾಡಿ, ಕಾಡು ಪ್ರಾಣಿಗಳು ಹಾಗೂ ವನ್ಯಜೀವಿಗಳೊಂದಿಗೆ ಸುರಕ್ಷಿತ ಅಂತರ ಕಾಯ್ದುಕೊಳ್ಳುವುದು ಅಗತ್ಯವಾಗಿದೆ. ಅವುಗಳ ಸ್ವಾಭಾವಿಕ ವಾಸಸ್ಥಳವನ್ನು ಸಂರಕ್ಷಿಸುವುದು ಪ್ರತಿಯೊಬ್ಬರ ಕರ್ತವ್ಯ ಎಂದು ಹೇಳಿದರು.

ಕರ್ನಾಟಕ ರಾಜ್ಯ ವನ್ಯಜೀವಿ ಮಂಡಳಿ ಸದಸ್ಯ ಮತ್ತು ವನ್ಯಜೀವಿ ಖ್ಯಾತ ಛಾಯಾಗ್ರಾಹಕ ಧ್ರುವ ಎಂ. ಪಾಟೀಲ ಮಾತನಾಡಿ, ಹಾವುಗಳ ನಾನಾ ಪ್ರಭೇದಗಳು, ಅವುಗಳ ಪರಿಸರದಲ್ಲಿನ ಪಾತ್ರ, ಜೀವ ವೈವಿಧ್ಯ ಸಂರಕ್ಷಣೆಯಲ್ಲಿ ಹಾವುಗಳ ಮಹತ್ವ ಹಾಗೂ ಹಾವುಗಳ ಬಗ್ಗೆ ಜನರಲ್ಲಿ ಮೂಡಿಸಬೇಕಿರುವ ವೈಜ್ಞಾನಿಕ ಅರಿವಿನ ಕುರಿತು ಮಾಹಿತಿ ನೀಡಿದರು.

ನಂತರ ನಡೆದ ತಾಂತ್ರಿಕ ಅಧಿವೇಶನದಲ್ಲಿ ಡಾ. ಅಶೋಕ್ ಬಿ. ಎನ್. ಮತ್ತು ಬಾಗಲಕೋಟೆ ಅರಣ್ಯ ಇಲಾಖೆಯ ಅರಣ್ಯ ರಕ್ಷಕ ಬಸನಗೌಡ ಬಗಲಿ ಅವರು ವಿದ್ಯಾರ್ಥಿಗಳೊಂದಿಗೆ ಸಂವಾದ ನಡೆಸಿದರು.

ಈ ಸಂದರ್ಭದಲ್ಲಿ ಬಿ.ಎಲ್.ಡಿ.ಇ. ಡೀಮ್ಡ್ ವಿವಿ ಸಮಕುಲಾಧಿಪತಿ ಡಾ. ವೈ. ಎಂ. ಜಯರಾಜ, ಕುಲಪತಿ ಡಾ. ಅರುಣ ಚಂ. ಇನಾಮದಾರ, ಬಿ.ಎಲ್.ಡಿ.ಇ. ಆಸ್ಪತ್ರೆಯ ವೈದ್ಯಕೀಯ ಅಧೀಕ್ಷಕ ಡಾ. ಸಂಜೀವ ಬೆಂಟೂರ, ಎಂಜಿನಿಯರಿಂಗ್ ಕಾಲೇಜಿನ ಪ್ರಾಚಾರ್ಯ ಡಾ. ಮಂಜುನಾಥ ಪಿ., ವಿಜಯಪುರ ಸಾಮಾಜಿಕ ಅರಣ್ಯ ವಿಭಾಗದ ಉಪ ಅರಣ್ಯ ಸಂರಕ್ಷಣಾಧಿಕಾರಿ ಶಿವರುದ್ರಪ್ಪ ಕಬಾಡಗಿ, ವಲಯ ಅರಣ್ಯಾಧಿಕಾರಿ ಸಂತೋಷ ಅಜೂರ, ಜಂಟಿ ಕೃಷಿ ನಿರ್ದೇಶಕ ಶಿವನಗೌಡ ಪಾಟೀಲ, ಅರಣ್ಯಾಧಿಕಾರಿ ಧನರಾಜ ಮಜಗೊಂಡ, ಡಾ. ಮುರುಗೇಶ ಪಟ್ಟಣಶೆಟ್ಟಿ ಮುಂತಾದವರು ಉಪಸ್ಥಿತರಿದ್ದರು.

## ಬಬಲೇಶ್ವರದಲ್ಲಿ ವಿಧಾನ ಪರಿಷತ್ ಶಾಸಕ ಸುನೀಲಗೌಡ ಪಾಟೀಲ ಅಭಿಮತ

# ಯುವಕರು ಉತ್ತಮ ಆರೋಗ್ಯ ಹೊಂದಲು ಕ್ರೀಡೆಗಳು ಸಹಕಾರಿ

■ ಉದಯರಶ್ಮಿ ದಿನಪತ್ರಿಕೆ




ವಿಜಯಪುರ: ಯುವಕರು ವೃತ್ತಿಪರ ಕ್ರೀಡಾಪಟುಗಳಾಗಲು ಪ್ರೋತ್ಸಾಹ ನೀಡಲಾಗುತ್ತಿದೆ ಎಂದು ವಿಧಾನ ಪರಿಷತ ಶಾಸಕ ಸುನೀಲಗೌಡ ಪಾಟೀಲ ಹೇಳಿದ್ದಾರೆ.

ಬುಧವಾರ ಬಬಲೇಶ್ವರದಲ್ಲಿ ದಿ. ಶ್ರೀ ಬಿ. ಎಂ. ಪಾಟೀಲ ಅವರ ಸ್ಮರಣಾರ್ಥ ಶಾಂತವೀರ ಕ್ರಿಕೆಟ್ ಕ್ಲಬ್ ಮತ್ತು ಶ್ರೀ ಸುನೀಲಗೌಡ ಪಾಟೀಲ ಅಭಿಮಾನಿ ಬಳಗದ ಸಂಯುಕ್ತಾಶ್ರಯದಲ್ಲಿ ಆಯೋಜಿಸಲಾದ ಬಬಲೇಶ್ವರ ಪ್ರೀಮಿಯರ್ ಲೀಗ್ ಸೀಸನ್-2 ಸಮಾರೋಪ ಸಮಾರಂಭದಲ್ಲಿ ವಿಜೇತ ತಂಡಗಳಿಗೆ ಪ್ರಶಸ್ತಿ ಪ್ರಧಾನ ಮಾಡಿ ಅವರು ಮಾತನಾಡಿದರು.

ಯುವಕರು ದೇಶದ ಅಮೂಲ್ಯ ಸಂಪತ್ತು. ಈ ಯುವಕರು ದೈಹಿಕ ಮತ್ತು ಮಾನಸಿಕವಾಗಿ ಸದೃಢರನ್ನಾಗಿ ಮಾಡಿ ಉತ್ತಮ ಆರೋಗ್ಯ ಹೊಂದಲು ಕ್ರೀಡೆಗಳು ಬಹುಪಯೋಗಿಯಾಗಿವೆ. ಹೀಗಾಗಿ ಬಬಲೇಶ್ವರ ಪ್ರೀಮಿಯರ್ ಲೀಗ್ ಕ್ರಿಕೆಟ್ ಸೇರಿದಂತೆ ನಾನಾ ಕ್ರೀಡೆಗಳಿಗೆ ಪ್ರೋತ್ಸಾಹ ನೀಡಲಾಗುತ್ತಿದೆ. ಬಿ.ಎಲ್.ಡಿ.ಇ ಸಂಸ್ಥೆಯ ಶ್ರೀ ಬಿ. ಎಂ. ಪಾಟೀಲ ಸ್ಪೋರ್ಟ್ಸ್ ಅಕ್ಯಾಡೆಮಿ ಮೂಲಕವೂ ಮಕ್ಕಳಿಗೆ ಬಾಲ್ಯದಿಂದಲೇ ಕ್ರಿಕೆಟ್, ಫುಟಬಾಲ, ಹಾಕಿ, ಬಾಸ್ಕೆಟ್ ಬಾಲ್, ಟೆನಿಕಾಯ್ಟ್, ಬ್ಯಾಡ್ಮಿಂಟನ್, ಟೆನಿಸ್ ಸೇರಿದಂತೆ ನಾನಾ ಕ್ರೀಡೆಗಳ ತರಬೇತಿ ನೀಡಲಾಗುತ್ತಿದೆ ಎಂದು ಅವರು ಹೇಳಿದರು.

ಈ ಸಂದರ್ಭದಲ್ಲಿ ಮಾತನಾಡಿದ ಜಿ. ಪಂ. ಮಾಜಿ ಅಧ್ಯಕ್ಷ ಎಸ್. ವಿ. ಪಾಟೀಲ, ಯುವಕರಿಗೆ ವ್ಯಸನಮುಕ್ತರಾಗಿ ಸದೃಢ ಆರೋಗ್ಯ ಹೊಂದಲು ಸುನೀಲಗೌಡ ಪಾಟೀಲ ಅವರು ಕಾರ್ಯೋನ್ಮುಖರಾಗಿದ್ದಾರೆ. ಯುವಕರ ಭವಿಷ್ಯದ ಬಗ್ಗೆ ಅಪಾರ ಕಾಳಜಿ ಹೊಂದಿರುವ ಅವರು, ಸಮಾಜಮುಖಿ ಚಟುವಟಿಗಳ ಕಡೆಗೆ ಯುವಕರನ್ನು ತೊಡಗಿಸುತ್ತಿದ್ದಾರೆ ಎಂದು ಹೇಳಿದರು. ಈ ಸಂದರ್ಭದಲ್ಲಿ ರುದ್ರಯ್ಯ ನಂದಿಕೋಲಮಠ ಸ್ವಾಮೀಜಿ, ಮುಖಂಡರಾದ ಈರನಗೌಡ ಬಿರಾದಾರ, ಸಚೀನ ಕಲಾವಂತ, ಡಾ. ಮಹಾಂತೇಶ ಕನ್ನೂರ, ಆನಂದ ಬೂದಿಹಾಳ, ಪ್ರಕಾಶ ಜಾಲಗೇರಿ, ಚನ್ನಬಸಪ್ಪ ಕೋಟ್ಯಾಳ, ಸಿದರಾಯ ಆಡಿನ್, ಪರಶುರಾಮ ಪಡಗಾರ, ಆನಂದ ಬೂದಿಹಾಳ, ಹಣಮಂತ ಬಡಚಿ, ರಾಜಗುರು ಉಳ್ಳಾಗಡ್ಡಿ, ಸಂತೋಷ ರಾಂಪುರ, ರಾಜೇಶ ತಂಬಾಕೆ, ಸುನೀಲ ಸಿಂಗಾಡೆ, ಸಚೀನ ಉಳ್ಳಾಗಡ್ಡಿ, ಬಾಳೇಶ ಉಳ್ಳಾಗಡ್ಡಿ, ಅಕ್ಷಯ ಮೆಡೆಗಾತ, ಹೇಮಂತ ಭೋವಿ, ಸದ್ದಾಂ ಮುಜಾವರ, ನವೀನ ಇಮನದ, ಬಸವರಾಜ ಲೋಕುರಿ, ಶ್ರೀಶೈಲ, ಸಿಪಿಐ ರಮೇಶ ಅವಜಿ, ಪಿ.ಎಸ್.ಐ ಬಸವರಾಜ ಬಿ. ಮಳೆಪ್ಪನವರ, ನಾನಾ ಕ್ರಿಕೆಟ್ ತಂಡಗಳ ಆಟಗಾರರು, ಗ್ರಾಮಸ್ಥರು ಉಪಸ್ಥಿತರಿದ್ದರು.

ಈ ಪಂದ್ಯಾವಳಿಯಲ್ಲಿ ಗೇಮ್ ಚೇಂಜರ್ ಜೈನಾಪುರ ಚಾಂಪಿಯನ್ ತಂಡವಾಗಿ ಹೊರ ಹೊಮ್ಮಿದರೆ, ಶಾಂತವೀರ ಕ್ರಿಕೆಟ್ ಕ್ಲಬ್ ಬಬಲೇಶ್ವರ ರೂ. ರನ್ನರ್ ಅಪ್ ಸ್ಥಾನ ಪಡೆಯಿತು. ಪಾಟೀಲ ಪ್ಯಾಂಥರ್ಸ್ ಹಳ್ಳಿ ತೃತೀಯ ಹಾಗೂ ಮಂಗಳೂರು ಟೈಟನ್ಸ್ ನಾಲ್ಕನೇ ಸ್ಥಾನ ಪಡೆದವು.

## ನಗರ ಹಾಗೂ ತಾಲೂಕು ಕೇಂದ್ರಗಳಲ್ಲಿ ಹಾಲು ಪರೀಕ್ಷಾ ಕೇಂದ್ರಗಳನ್ನು (ಲ್ಯಾಬ್) ಸ್ಥಾಪಿಸಲು ಒತ್ತಾಯ

# ಕೆಮಿಕಲ್ ಮಿಶ್ರಿತ ಹಾಲು ತಡೆಗಟ್ಟಲು ಅಪ್ಪು ಪಟ್ಟಣಶೆಟ್ಟಿ ಆಗ್ರಹ

■ ಉದಯರಶ್ಮಿ ದಿನಪತ್ರಿಕೆ




ವಿಜಯಪುರ: ಜಿಲ್ಲೆಯಲ್ಲಿ ಕೆಮಿಕಲ್ ಮಿಶ್ರಿತ ವಿಷಯುಕ್ತ ಹಾಲು ವಿತರಣೆಯಾಗುತ್ತಿದ್ದು, ಅದನ್ನು ತಡೆಗಟ್ಟಲು ಆಗ್ರಹಿಸಿ ಮಾಜಿ ಸಚಿವ ಅಪ್ಪಾಸಾಹೇಬ ಪಟ್ಟಣಶೆಟ್ಟಿ ಅವರು ಗುರುವಾರ ಜಿಲ್ಲಾಧಿಕಾರಿ ಅವ-ರಿಗೆ ಮನವಿ ಸಲ್ಲಿಸಿದರು. ಈ ವೇಳೆ ಮಾತನಾಡಿದ ಮಾಜಿ ಸಚಿವ ಅಪ್ಪಾಸಾಹೇಬ ಪಟ್ಟಣಶೆಟ್ಟಿ ಅವರು, ಹಲವಾರು ತಿಂಗಳುಗಳಿಂದ ನಮ್ಮ ವಿಜಯಪುರ ಜಿಲ್ಲೆ ಹಾಗೂ ನಗರದಲ್ಲಿ ನೆರೆಯ ಮಹಾರಾಷ್ಟ್ರದಿಂದ ಮತ್ತು ಬೇರೆ ತಾಲೂಕುಗಳಿಂದ ಕೆಮಿಕಲ್ ನಿಂದ ತಯಾರಿಸಿದ ಹಾಲು ಪೂರೈಸುತ್ತಿರುವುದು ಕಂಡು ಬಂದಿದೆ. ಯಾವುದೇ ಕಂಪನಿಯ ಪ್ಯಾಕೇಟ್ ಇಲ್ಲದೆ ಕ್ಯಾನುಗಳಲ್ಲಿ ಇದನ್ನು ತಂದು ಜನಸಾಮಾನ್ಯರ ಮನೆಗಳಿಗೆ ಇಂತಹ ಹಾಲನ್ನು ವಿತರಿಸುತ್ತಿದ್ದಾರೆ. ಇದನ್ನು ತಡೆಗಟ್ಟಲು ವಿಜಯಪುರ ನಗರ ಹಾಗೂ ಸುತ್ತಮುತ್ತಲಿನ ತಾಲೂಕುಗಳಲ್ಲಿ ಹಾಲು ಪರೀಕ್ಷಾ ಕೇಂದ್ರಗಳನ್ನು(ಲ್ಯಾಬ್) ಸ್ಥಾಪಿಸಿ ಹಾಲನ್ನು ವಿತರಿಸುವವರು ಕಡ್ಡಾಯವಾಗಿ ಇಲ್ಲಿ ಪರೀಕ್ಷಿಸಿ ನಂತರ ವಿತರಿಸಬೇಕು ಎಂದು ಕಟ್ಟುನಿಟ್ಟಿನ ಆದೇಶವನ್ನು ಹೊರಡಿಸಬೇಕು. ನಿರ್ಜನ ಪ್ರದೇಶದಲ್ಲಿ ಇದನ್ನು ತಯಾ-ರಿಸುತ್ತಿದ್ದು, ಈ ಹಾಲನ್ನು ಸೇವಿಸಿದ ಜನರಲ್ಲಿ ಆರೋಗ್ಯ ಸಮಸ್ಯೆಗಳು ಹೆಚ್ಚಾಗುತ್ತಿವೆ. ಜನರ ಜೀವದ ಜೊತೆ ಆಟವಾಡುತ್ತಿರುವ ಇಂತಹ ಅಪರಾಧಿಗಳನ್ನು ತಕ್ಷಣೆ ಪತ್ತೆ ಹಚ್ಚಿ ನಿಧಾ9ಕ್ಷಿಣ್ಯ ಕ್ರಮ ಕೈಗೊಳ್ಳಲು ಪಟ್ಟಣಶೆಟ್ಟಿ ಆಗ್ರಹಿಸಿದ್ದಾರೆ.

## ಕಾನಿಪ ಸಂಘದ ಜಿಲ್ಲಾಧ್ಯಕ್ಷ ಅಶೋಕ ಯಡಳ್ಳಿ, ಪ್ರಧಾನ ಕಾರ್ಯದರ್ಶಿ ಇಂದುಶೇಖರ ಮಣೂರ ಹಾಗೂ ರಾಜ್ಯ ಕಾರ್ಯಕಾರಿಣಿ ಸದಸ್ಯ ಪ್ರಕಾಶ ಬೆಣ್ಣೂರ ಪತ್ರಿಕಾ ಪ್ರಕಟಣೆ

# ಜುಲೈ 19 ರಂದು ಕಾರ್ಯ ನಿರತ ಪತ್ರಕರ್ತರ ಸಂಘದಿಂದ ಪತ್ರಿಕಾ ದಿನಾಚರಣೆ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ (ಕೆಯುಡಬ್ಲೂಜೆ), ವಿಜಯಪುರ ಜಿಲ್ಲಾ ಘಟಕದಿಂದ ಇದೇ ಜುಲೈ 19 ರಂದು ನಗರದ ಶ್ರೀ ಕಂದಗಲ್ ಹನುಮಂತರಾಯ ರಂಗಮಂದಿರಲ್ಲಿ ಬೆಳಿಗ್ಗೆ 11ಗಂಟೆಗೆ

ಪತ್ರಿಕಾ ದಿನಾಚರಣೆಯನ್ನು ಆಯೋಜನೆ ಮಾಡಲಾಗಿದೆ.

ಜುಲೈ 19 ರ ಬೆಳಿಗ್ಗೆ 11 ಗಂಟೆಗೆ ಜಿಲ್ಲಾ ಉಸ್ತುವಾರಿ ಹಾಗೂ ಬೃಹತ್ ಮತ್ತು ಮಧ್ಯಮ ಕೈಗಾರಿಕೆ, ಮೂಲ ಸೌಕರ್ಯಾಭಿವೃದ್ಧಿ ಸಚಿವ ಎಂ ಬಿ ಪಾಟೀಲ್ ಕಾರ್ಯಕ್ರಮ ಉದ್ಘಾಟನೆ ನೆರವೇರಿಸಲಿದ್ದಾರೆ. ಇನ್ನು ಕಾನಿಪ ವಿಜಯಪುರ ಘಟಕದಿಂದ ಕೊಡಮಾಡುವ ಜಿಲ್ಲಾ ಮಟ್ಟದ ವಾರ್ಷಿಕ ಪ್ರಶಸ್ತಿಯನ್ನು ವಿಜಯಪುರ ನಗರ ಶಾಸಕ ಬಸನಗೌಡ ಪಾಟೀಲ್ ಯತ್ನಾಳ ಪ್ರದಾನ ಮಾಡಲಿದ್ದಾರೆ. ಎಸ್ ಎಸ್ ಎಲ್ ಸಿ ಹಾಗೂ ದ್ವಿತೀಯ ಪಿಯುಸಿಯಲ್ಲಿ ಸಾಧನೆ ಮಾಡಿದ ಜಿಲ್ಲಾ ಮಟ್ಟದ ಪತ್ರಕರ್ತರ ಮಕ್ಕಳಿಗೆ ಪ್ರತಿಭಾ ಪುರಸ್ಕಾರವನ್ನು ನಾಗಠಾಣ ಶಾಸಕ ವಿಠಲ ಕಟಕದೊಂಡ ನೆರವೇರಿಸಲಿದ್ದಾರೆ.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಕಾನಿಪ ವಿಜಯಪುರ ಜಿಲ್ಲಾ ಘಟಕದ ಅಧ್ಯಕ್ಷ ಅಶೋಕ ಯಡಳ್ಳಿ ವಹಿಸಲಿದ್ದಾರೆ. ಮುಖ್ಯ ಅತಿಥಿಗಳಾಗಿ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ರಾಜ್ಯಾಧ್ಯಕ್ಷ ಶಿವಾನಂದ ತಗಡೂರ, ವಿಜಯಪುರ ಮಹಾನಗರ ಪಾಲಿಕೆಯ ಮೇಯರ್ ಎಂ ಎಸ್ ಕರಡಿ, ವಿಜಯಪುರ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಡಾ ಗಂಗಾಧರ ಸಂಬಣ್ಣಿ ವಹಿಸಲಿದ್ದಾರೆ.

ಕಾರ್ಯಕ್ರಮಕ್ಕೆ ವಿಶೇಷ ಆಹ್ವಾನಿತರಾಗಿ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಪ್ರಧಾನ ಕಾರ್ಯದರ್ಶಿ ಜಿ ಸಿ ಲೋಕೇಶ, ರಾಜ್ಯ ಕಾರ್ಯದರ್ಶಿ ಹಾಗೂ ವಿಜಯಪುರ ಜಿಲ್ಲಾ ಉಸ್ತುವಾರಿ ಪುಂಡಲೀಕ ಬಾಳೋಜಿ ಭಾಗಿಯಾಗಲಿದ್ದಾರೆ. ವಿಜಯಪುರ ಜಿಲ್ಲಾಧಿಕಾರಿ ಡಾ ಆನಂದ ಕೆ, ಜಿಲ್ಲಾ ಪೊಲೀಸ್ ವರಿಷ್ಟಾಧಿಕಾರಿ ಲಕ್ಷ್ಮಣ ನಿಂಬರಗಿ, ಜಿಲ್ಲಾ ಪಂಚಾಯತಿ ಸಿಇಓ ರಿಷಿ ಆನಂದ, ಪಾಲಿಕೆಯ ಆಯುಕ್ತರಾದ ವಿಜಯಕುಮಾರ ಮೆಕ್ಕಳಕಿ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಸಹಾಯಕ ನಿರ್ದೇಶಕ ಅಮರೇಶ ದೊಡಮನಿ ಅತಿಥಿಗಳಾಗಿ ಪಾಲ್ಗೊಳ್ಳಲಿದ್ದಾರೆ ಎಂದು ಕಾನಿಪ ಸಂಘದ ಜಿಲ್ಲಾಧ್ಯಕ್ಷ ಅಶೋಕ ಯಡಳ್ಳಿ, ಪ್ರಧಾನ ಕಾರ್ಯದರ್ಶಿ ಇಂದುಶೇಖರ ಮಣೂರ ಹಾಗೂ ರಾಜ್ಯ ಕಾರ್ಯಕಾರಿಣಿ ಸದಸ್ಯ ಪ್ರಕಾಶ ಬೆಣ್ಣೂರ ಪತ್ರಿಕಾ ಪ್ರಕಟಣೆ ಮೂಲಕ ತಿಳಿಸಿದ್ದಾರೆ.

ಜಿಲ್ಲಾ ಘಟಕದ ಎಲ್ಲಾ ಪದಾಧಿಕಾರಿಗಳು, ಕಾರ್ಯಕಾರಿಣಿ ಸದಸ್ಯರು, ಸಂಘಟನಾ ಕಾರ್ಯದರ್ಶಿಗಳು, ರಾಷ್ಟ್ರೀಯ ಮಂಡಳಿ ಸದಸ್ಯರು, ಸಲಹಾ ಸಮಿತಿ ಸದಸ್ಯರು ಎಲ್ಲಾ ತಾಲೂಕಾ ಘಟಕದ ಪದಾಧಿಕಾರಿಗಳು ಕಾರ್ಯಕ್ರಮದಲ್ಲಿ ಭಾಗಿಯಾಗುತ್ತಾರೆ.

ಜಿಲ್ಲೆಯ ಕಾನಿಪ ಸಂಘದ ಸರ್ವ ಸದಸ್ಯರು ಈ ಕಾರ್ಯಕ್ರಮದಲ್ಲಿ ಭಾಗವಹಿಸಬೇಕೆಂದು ಈ ಮೂಲಕ ಮನವಿ ಮಾಡಿಕೊಳ್ಳಲಾಗಿದೆ.

ಕಾರ್ಯಕ್ರಮದ ಬಳಿಕ ಪ್ರೀತಿಯ ಭೋಜನದ ವ್ಯವಸ್ಥೆ ಮಾಡಲಾಗಿದೆ.

## 15 ವರ್ಷಗಳಿಂದ ಹದಗೆಟ್ಟ ರಸ್ತೆ | ಹಲವು ಬಾರಿ ಮನವಿ ಸಲ್ಲಿಸಿದರೂ ಸ್ಪಂದಿಸದ ಅಧಿಕಾರಿಗಳ ವಿರುದ್ಧ ಗ್ರಾಮಸ್ಥರ ಆಕ್ರೋಶ

# ಹದಗೆಟ್ಟ ಗುಂದವಾನಶೀಗಣಾಪುರ ರಸ್ತೆ ದುರಸ್ತಿ ಯಾವಾಗ?

■ ಉದಯರಶ್ಮಿ ದಿನಪತ್ರಿಕೆ



ಚಡಚಣ: ತಾಲೂಕಿನ ಗುಂದವಾನದಿಂದ ಶೀಗಣಾಪುರ ಗ್ರಾಮಕ್ಕೆ ಸಂಪರ್ಕ ಕಲ್ಪಿಸುವ ಪ್ರಮುಖ ವಹಿವಾಟು ರಸ್ತೆ ಕಳೆದ ಸುಮಾರು ಹದಿನೈದು ವರ್ಷಗಳಿಂದ ಸಂಪೂರ್ಣ ಹದಗೆಟ್ಟಿದ್ದು, ರೈತರು, ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕರು ನಿತ್ಯ ಸಂಕಷ್ಟ ಅನುಭವಿಸುತ್ತಿದ್ದಾರೆ.

ಈ ಕುರಿತು ಹಲವು ಬಾರಿ ಜಿಲ್ಲಾಧಿಕಾರಿ, ಜಿಲ್ಲಾ ಪಂಚಾಯತ್ ಹಾಗೂ ಗ್ರಾಮ ಪಂಚಾಯತ್ ಅಧಿಕಾರಿಗಳಿಗೆ ಲಿಖಿತ ಮನವಿ ಸಲ್ಲಿಸಿದರೂ ಯಾವುದೇ ಕ್ರಮ ಕೈಗೊಳ್ಳದ ಹಿನ್ನೆಲೆಯಲ್ಲಿ ಗ್ರಾಮಸ್ಥರು ತೀವ್ರ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ರೈತ ಮಲ್ಲಿಕಾರ್ಜುನ ತುಪ್ಪದ ಮಾತನಾಡಿ, "ಈ ರಸ್ತೆಯ ದುಸ್ಥಿತಿಯ ಬಗ್ಗೆ ಜಿಲ್ಲಾಧಿಕಾರಿಗಳಿಂದ ಹಿಡಿದು ಗ್ರಾಮ ಪಂಚಾಯತ್ ಅಧಿಕಾರಿಗಳವರೆಗೆ ಎಲ್ಲರ ಗಮನಕ್ಕೆ ತಂದಿದ್ದೇವೆ. ಆದರೆ ಕಣ್ಣಿದ್ದೂ ಕುರುಡರು, ಕಿವಿಯಿದ್ದೂ ಕಿವುಡರಂತೆ ಅಧಿಕಾರಿಗಳು ವರ್ತಿಸುತ್ತಿದ್ದಾರೆ. ಶಾಲಾ ವಿದ್ಯಾರ್ಥಿಗಳ ಹಾಗೂ ರೈತರ ಸಂಕಷ್ಟ ಯಾರಿಗೂ ಕಾಣುತ್ತಿಲ್ಲ" ಎಂದು ಆಕ್ರೋಶ ವ್ಯಕ್ತಪಡಿಸಿದರು.

ರೈತ ತುಕಾರಾಮ ಕರಗಣಿ ಮಾತನಾಡಿ, "ಸುಮಾರು 15 ವರ್ಷಗಳಿಂದ ರಸ್ತೆ ದುರಸ್ತಿಯಾಗಿಲ್ಲ. ಆದರೆ ಗ್ರಾಮ ಪಂಚಾಯತ್ ಮಾತ್ರ ಕಾಮಗಾರಿ ನಡೆಸಿದಂತೆ ಬೋಗಸ್ ಬಿಲ್ ಎತ್ತಿರುವ ಅನುಮಾನ ವ್ಯಕ್ತವಾಗುತ್ತಿದೆ. ರೈತರ ಸಮಸ್ಯೆಗಳಿಗೆ ಯಾವುದೇ ಬೆಲೆ ಇಲ್ಲ. ಸ್ವಲ್ಪ ಮಳೆ ಬಂದರೂ ರಸ್ತೆ ಸಂಪೂರ್ಣ ಕೆಸರುಮಯವಾಗಿ ಸುಗಮ ಸಂಚಾರಕ್ಕೆ ಅಸಾಧ್ಯವಾಗುತ್ತದೆ. ರೈತರು ತಮ್ಮ ಕೃಷಿ ಚಟುವಟಿಕೆಗಳಿಗೆ ತೆರಳಲು ಹರಸಾಹಸ ಪಡಬೇಕಾಗಿದೆ. ಶಾಲಾ-ಕಾಲೇಜು ವಿದ್ಯಾರ್ಥಿಗಳು ಸಮವಸ್ತ್ರ ಧರಿಸಿ ಹೋಗುವುದೇ ಕಷ್ಟವಾಗಿದ್ದು, ಪ್ರತಿದಿನ ಜೀವದ ಹಂಗು ತೊರೆದು ಸಂಚರಿಸುವ ಪರಿಸ್ಥಿತಿ ನಿರ್ಮಾಣವಾಗಿದೆ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಗ್ರಾಮಸ್ಥರ ಪ್ರಕಾರ, ಈ ರಸ್ತೆ ಸುಧಾರಣೆಗೆ ಜಿಲ್ಲಾಧಿಕಾರಿಗಳು, ಜಿಲ್ಲಾ ಪಂಚಾಯತ್ ಹಾಗೂ ಗ್ರಾಮ ಪಂಚಾಯತ್ ಕಚೇರಿಗೆ ಅನೇಕ ಬಾರಿ ಲಿಖಿತ ಮನವಿ ಸಲ್ಲಿಸಲಾಗಿದೆ. ಆದರೂ ಪಿಡಿಒ ಸೇರಿದಂತೆ ಸಂಬಂಧಪಟ್ಟ ಅಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲಿಸುವ ಕನಿಷ್ಠ ಪ್ರಯತ್ನವನ್ನೂ ಕೂಡಾ ಮಾಡಿಲ್ಲ. ಯಾವುದಾದರೂ ದೊಡ್ಡ ಅನಾಹುತ ಸಂಭವಿಸಿದ ಬಳಿಕವೇ ಅಧಿಕಾ-ರಿಗಳು ಎಚ್ಚೆತ್ತುಕೊಳ್ಳುವರೇ?" ಎಂಬ ಪ್ರಶ್ನೆಯನ್ನು ಗ್ರಾಮಸ್ಥರು ಎತ್ತಿದ್ದಾರೆ.

ತಕ್ಷಣ ರಸ್ತೆ ದುರಸ್ತಿ ಕಾಮಗಾರಿ ಕೈಗೊಂಡು ಗುಂದವಾನ ಶೀಗಣಾಪುರ ಗ್ರಾಮಗಳ ಜನರ ಸಮಸ್ಯೆಗೆ ಶಾಶ್ವತ ಪರಿಹಾರ ಕಲ್ಪಿಸಬೇಕು. ಇಲ್ಲದಿದ್ದರೆ ಉಗ್ರ ಹೋರಾಟ ನಡೆಸಲಾಗುವುದು ಎಂದು ಗ್ರಾಮಸ್ಥರು ಎಚ್ಚ-ರಿಕೆ ನೀಡಿದ್ದಾರೆ.

# ಪ್ರಕೃತಿಯಿಂದ ನಾವು

■ ಉದಯರಶ್ಮಿ ದಿನಪತ್ರಿಕೆ

"ಮಾನವನ ಜೀವನಕ್ಕೆ ದೇವರು ನೀಡಿದ ಅತ್ಯಮೂಲ್ಯ ಕೊಡುಗೆ ಈ ಪ್ರಕೃತಿ. ಮನುಷ್ಯನ ಬದುಕಿಗೆ ಪರಿಸರವೇ ಜೀವಾಳ. ಮನುಜನಿಗೆ ಉಸಿರಾಡಲು ಗಾಳಿ ಕೊಟ್ಟು

ಸಲಹುತ್ತಲೇ ಬರುತ್ತಿದೆ. ಆದರೆ ಮಾನವ ಈಗೀಗ ಪರಿಸರವನ್ನೇ ಹಣದ ಆಸೆ ಹೀನ ಕೃತ್ಯಗಳಿಂದ ದುರುಪಯೋಗ ಪಡಿಸಿಕೊಂಡು ಪ್ರಕೃತಿಯನ್ನೇ ನಾಶ ಪಡಿಸುತ್ತಾ ತನ್ನ ಅಳಿವಿಗೆ ತಾನೇ ಕಾರಣವಾಗುತ್ತಿದ್ದಾನೆ. ಇದು ಹೀಗೆ ಮುಂದುವರೆದರೆ ಮುಂದಿನ ಪೀಳಿಗೆಗೆ ಅತೀ ಕಷ್ಟ ಎದುರಾಗುವ ಸಂದರ್ಭ ಒದಗುತ್ತದೆ. ಮಾನವನ ದುರಾಸೆಯ ಚಟುವಟಿಕೆಗಳಿಂದಾಗಿ ಭೂಮಿಯು ಮಲಿನಗೊಳ್ಳುತ್ತಾ ಜಾಗತಿಕ ತಾಪಮಾನವು ನಿರಂತರವಾಗಿ ಏರಿಕೆಯಾಗುತ್ತಲೇ ಇದೆ. ಇಂಧನಗಳ ಬಳಕೆ, ಕೈಗಾರೀಕರಣ, ಅರಣ್ಯನಾಶ

ಇಂಧನಗಳ ಬಳಕೆ, ಕೈಗಾರೀಕರಣ,



ಅರಣ್ಯನಾಶ ಇವುಗಳೇ ಜಾಗತಿಕ ತಾಪಮಾನಕ್ಕೆ ಮುಖ್ಯ ಕಾರಣಗಳಾಗಿವೆ. ಎಣಿಸುತ್ತಾ ಹೋದರೆ ಇನ್ನು ಬಹಳಷ್ಟಿವೆ. ಇವುಗಳನ್ನು ತಡೆಯ ಬೇಕಾದದ್ದು ಮಾನವರಾದ ನಮ್ಮ ಕರ್ತವ್ಯವೇ ಆಗಿದೆ. ಪರಿಸರದ ಮೌಲ್ಯವನ್ನು ಅರಿತು, ಈಗಲಾದರೂ ಜಾಗೃತಗೊಳ್ಳಬೇಕಿದೆ. ಜಾಗತಿ–ಕ ತಾಪಮಾನವನ್ನು ಇನ್ನು ಮುಂದೆಯಾದರೂ ತಕ್ಕ ಮಟ್ಟಿಗೆ ಕಡಿಮೆ ಮಾಡಬಹುದಾಗಿದೆ. ಅವುಗಳೇನೆಂದರೆ

**ಪ್ಲಾಸ್ಟಿಕ್ ಬಳಕೆ**

ಪ್ಲಾಸ್ಟಿಕ್ ಬಳಕೆ ಕಡಿಮೆ ಮಾಡುತ್ತಾ ಹೋಗಬಹುದು, ಅವುಗಳ ಬದಲಾಗಿ ಪರಿಸರ ಸ್ನೇಹಿ ವಸ್ತುಗಳನ್ನು ಉಪಯೋಗಿಸುವ ಕಾರ್ಯ ಮಾಡಬಹುದು.



**ಪೆಟ್ರೋಲ್, ಡೀಸೆಲ್**

**ಇಂಧನಗಳಾದ ಪೆಟ್ರೋಲ್, ಡೀಸೆಲ್**

ಇವುಗಳ ಬಳಕೆ ಕಡಿಮೆ ಮಾಡಬೇಕು. ಬದಲಾಗಿ ಸೈಕಲ್, ಅಥವಾ ಎಲೆಕ್ಟ್ರಿಕ್ ವಾಹನಗಳನ್ನು ಬಳಸಬಹುದು. ಇಂಧನಗಳ ಬದಲು ಸೌರಶಕ್ತಿ, ಪವನ ಶಕ್ತಿ ಇವುಗಳನ್ನು ಬಳಸಬಹುದು. ಸಾರ್ವಜನಿಕ ಸಾರಿಗೆಗಳನ್ನು ಬಳಸಿ ಹೆಚ್ಚುತ್ತಿರುವ ವಾಹನಗಳ ಸಂಖ್ಯೆಯನ್ನು ಕಡಿಮೆ ಮಾಡಬಹುದು.

**ಅತೀ ಮುಖ್ಯ**

ಅಂಶವೆಂದರೆ ಪ್ರಕೃತಿಯ ನಾಶವನ್ನು ತಡೆಯುವುದು. ಪರಿಸರವನ್ನು ಪ್ರೀತಿಸುವುದು. ಗಿಡಮರಗಳನ್ನು ಬೆಳೆಸಿ ಪೋಷಿಸುತ್ತಾ ಸಾಗುವುದು.

**ವಸ್ತುಗಳ ಮರುಬಳಕೆ**

ವಸ್ತುಗಳ ಮರುಬಳಕೆ ಮಾಡುತ್ತಾ ತ್ಯಾಜ್ಯ ವಸ್ತುಗಳ ಪ್ರಮಾಣವನ್ನು ಕಡಿಮೆ ಮಾಡಬಹುದು.

**ವಿದ್ಯುತ್ ಉಳಿತಾಯ**

ವಿದ್ಯುತ್ ಉಳಿತಾಯ ನೀರನ್ನು ಪೋಲಾಗದಂತೆ ಮಿತವಾಗಿ ಬಳಸುವುದು.ಹಿತ ಮಿತ ಅಭ್ಯಾಸಗಳನ್ನು ಬೆಳೆಸಿಕೊಳ್ಳುವುದು. ಒಟ್ಟಾರೆ ಪ್ರಕೃತಿ ನೀಡುತ್ತಿರುವ ಕೊಡುಗೆಗಳನ್ನು ದುರ್ಬಳಕೆ ಮಾಡದೆ ಸಕಾರಣಗಳಿಗೆ ಬಳಸಿಕೊಂಡರೆ ಹೆಚ್ಚುತ್ತಿರುವ ಜಾಗತಿಕ ತಾಪಮಾನವನ್ನು ನಿಯಂತ್ರಿಸಬಹುದು..

ಲೇಖನ
– ಸಾವಿತ್ರಿ ಸಿದ್ದರಾಮು
ತುಮಕೂರು



# ಮಳೆಗಾಗಿ ದೇವರ ಮೊರೆ: ಮಂದಿರಗಳಲ್ಲಿ ಭಜನೆ, ದೇವರ ವಿಗ್ರಹಗಳಿಗೆ ಜಲಾಭಿಷೇಕ ಪ್ರಾರ್ಥನೆ

ಕರಜಗಿ :ಅನ್ನದಾತನ ಬದುಕು ಪ್ರಕೃತಿಯೊಂದಿಗೆ ಬೆಸತ್ತುಕೊಂಡಿದೆ ಆಕಾಶದಲ್ಲಿ ಮೋಡಗಳು ಕವಿದರೆ ರೈತನ ಮುಖದಲ್ಲಿ ಮಂದಹಾಸ ಮೂಡುತ್ತದೆ. ಮಳೆ ಕೈಕೊಟ್ಟರೆ ಅದೇ ಮುಖದಲ್ಲಿ ಆತಂಕ ಆವರಿಸುತ್ತದೆ. ಈ ಬಾರಿ ಮುಂಗಾರು ಮಳೆ ನಿರೀಕ್ಷಿತ ಪ್ರಮಾಣದಲ್ಲಿ ಸು–ರಿಯದ ಕಾರಣ ಅಫಜಲಪುರ ತಾಲೂಕಿನಲ್ಲಿ ರೈತರು ತೀವ್ರ ಸಂಕಷ್ಟಕ್ಕೆ ಸಿಲುಕಿದ್ದಾರೆ. ಹೊಲಗಳಲ್ಲಿ ಹಸಿರಾಗಬೇಕಿದ್ದ ಕಬ್ಬು,ಹತ್ತಿ, ಬೆಳೆಗಳು ಒಣಗುವ ಹಂತಕ್ಕೆ ತಲುಪಿದ್ದು, ರೈತರಲ್ಲಿ ಆತಂಕ ಮನೆ ಮಾಡಿದೆ.

ಮಳೆಯಾಗಲಿದೆ ಎಂಬ ಆಶಯದಿಂದ ಗ್ರಾಮೀಣ ಪ್ರದೇಶಗಳಲ್ಲಿ ವಿವಿಧ ಧಾರ್ಮಿಕ ಆಚರಣೆಗಳು ನಡೆಯುತ್ತಿವೆ. ಅಫಜಲಪೂರ ತಾಲೂಕಿನ ಹೊಸೂರ ಗ್ರಾಮದ ದೇವಾಲಯಗಳಲ್ಲಿ ವಿಶೇಷ ಪೂಜೆ, ಭಜನೆ, ಜೊತೆಗೆ ರೈತರು ಮೌನವ್ರತ ಆಚರಿಸಿ ದೇವರ ಮೊರೆ ಹೋಗುತ್ತಿದ್ದಾರೆ. ಹೊಸೂರ ಗ್ರಾಮದಿಂದ ಮಹಾರಾಷ್ಟ್ರದ ಹಿಳ್ಳಿ ಗ್ರಾಮದ ಭಿಮಾ ನದಿಯಿಂದ ಕೊಡಗಳಲ್ಲಿ ನೀರು ತಂದು ದೇವರ ವಿಗ್ರಹಗಳಿಗೆ ಜಲಾಭಿಷೇಕ ಮಾಡಿ, 'ಒಳ್ಳೆಯ ಮಳೆ ನೀಡಿ ನಮ್ಮ ಬೆಳೆಯನ್ನು ಕಾಪಾಡು' ಎಂದು ಭಕ್ತಿಯಿಂದ ಪ್ರಾರ್ಥಿಸುತ್ತಿದ್ದಾರೆ.

ಮಳೆಯ ಕೊರತೆಯಿಂದ ಕೃಷಿ ಚಟುವಟಿ–




ಕೆಗಳು ಸಂಪೂರ್ಣ ಕುಂಠಿತಗೊಂಡಿವೆ. ಬಿತ್ತನೆ ಮಾಡಿದ ರೈತರು ಮಾತ್ರವಲ್ಲದೆ, ಕೃಷಿ ಕೂಲಿಕಾರರೂ ಉದ್ಯೋಗದ ಕೊರತೆಯಿಂದ ಸಂಕಷ್ಟ ಅನುಭವಿಸುತ್ತಿದ್ದಾರೆ. ಜಾನುವಾರುಗಳಿಗೆ ಮೇವು ಹಾಗೂ ಕುಡಿಯುವ ನೀರಿನ ಸಮಸ್ಯೆಯೂ ನಿಧಾನವಾಗಿ ತಲೆದೋರುತ್ತಿದೆ. ಬಸವರಾಜ ಸಂಗೋಳಗಿ,ಶರಣಪ್ಪ ಹಿಳ್ಳಿ,ಕಲ್ಯಾನಿ ನಂದಗಾಂವ, ಗುರುಶಾಂತ ಬ್ಯಾಗಳ್ಳಿ, ಓಂಕಾರ ಅಂದೇವಾಡಿ, ಚಿದಾನಂದ ನಂದಗಾಂವ, ವಿಜಯಕುಮಾರ ದುರ್ಗ, ಮಂಜುನಾಥ ಚಿನಮಳ್ಳಿ, ತೋಟಪ್ಪ ದುರ್ಗ, ಮುತ್ತಪ್ಪ ಪೂಜಾರಿ ಹಾಗೂ ಇತರರಿದ್ದರು.

# ಕಾಯಕ ನಿಷ್ಠೆ, ಪ್ರಾಮಾಣಿಕತೆಯ ಪ್ರತೀಕ ಶರಣ ಕುಂಬಾರ ಗುಂಡಯ್ಯ

ಕಲಬುರಗಿ : ಶರಣ ಕುಂಬಾರ ಗುಂಡಯ್ಯನವರು 12ನೇ ಶತಮಾನದ ಶ್ರೇಷ್ಠ ವಚನಕಾರರು. ತಮ್ಮ ಕುಂಬಾರಿಕೆಯ ಕಾಯಕ ನಿಷ್ಟರು ಮತ್ತು ಪ್ರಾಮಾಣಿಕತೆಗೆ ಹೆಸರುವಾಸಿಯಾಗಿದ್ದವರು ಎಂದು ಉಪನ್ಯಾಸಕ, ಶರಣ ಚಿಂತಕ ಎಚ್.ಬಿ.ಪಾಟೀಲ್ ಹೇಳಿದರು.

ನಗರದ ಆಳಂದ ರಸ್ತೆಯ ಸಂತೋಷ ಕಾಲನಿ ಕ್ರಾಸ್ ಸಮೀಪದ 'ರಿಪಬ್ಲಿಕ್ ಸ್ಪೋಕನ್ ಇಂಗ್ಲೀಷ್ ಅಕಾಡೆಮಿ'ಯಲ್ಲಿ 'ಬಸವೇಶ್ವರ ಸಮಾಜ ಸೇವಾ ಬಳಗ'ದ ವತಿಯಿಂದ ಜರುಗಿದ "ಶರಣ ಕುಂಬಾರ ಗುಂಡಯ್ಯನವರ ಜಯಂತಿ"ಯ ಕಾರ್ಯಕ್ರಮದಲ್ಲಿ ಅವರು ಮಾತನಾಡುತ್ತಿದ್ದರು.

ಗುಂಡಯ್ಯನವರು ಬೀದರ್ ಜಿಲ್ಲೆಯ ಭಾಲ್ಕಿ ಮೂಲದವರು. ಇವರು ಮಡಕೆ ಮಾಡುವ ಕುಂಬಾ–ರಿಕೆಯನ್ನು ತಮ್ಮ ಕಾಯಕವಾಗಿಸಿಕೊಂಡಿದ್ದರು. "ಕಾಯಕವೇ ಕೈಲಾಸ" ಎಂಬ ತತ್ವಕ್ಕೆ ಬದ್ಧರಾಗಿದ್ದರು. ಅವರ ಪತ್ನಿ ಕೇತಲದೇವಿಯು ಕೂಡ ವಚನಕಾರ್ತಿಯಾಗಿದ್ದರು. ಕಾಯಕವನ್ನು ಪೂಜ್ಯಭಾವನೆಯಿಂದ ಕಾಣುತ್ತಿದ್ದ ಇವರು, ದುಡಿಮೆಯಲ್ಲೇ ಶಿವನನ್ನು ಕಾಣುತ್ತಿದ್ದರು. ಇವರು ಮಣ್ಣು ತರಲು ಹೋದಾಗ ಚಿನ್ನದ ನಿಧಿಯೊಂದು



ಸಿಕ್ಕಿತು. ಆದರೆ ಅದನ್ನು ಸ್ವಾರ್ಥಕ್ಕೆ ಬಳಸಿಕೊಳ್ಳದೆ, ರಾಜನ ಆಸ್ತಿಯೆಂದು ಭಾವಿಸಿ ರಾಜನಿಗೆ ಒಪ್ಪಿಸಿ ಪ್ರಾಮಾಣಿಕತೆಯನ್ನು ಮೆರೆದರು. ಗುಂಡಯ್ಯನವರ ಸ್ವಂತ ವಚನಗಳು ಇದುವರೆಗೆ ಲಭ್ಯವಾಗಿಲ್ಲ. ಆದರೆ ಅವರ ಪತ್ನಿ ಕೇತಲದೇವಿ ಹಾಗೂ ಇತರೆ ಜನಪದ ಕವಿಗಳ ಕೃತಿಗಳಲ್ಲಿ ಇವರ ಜೀವನದ ಘಟನೆಗಳು ಮತ್ತು ತತ್ವಗಳು ದಾಖಲಾಗಿವೆ ಎಂದು ನುಡಿದರು.

ಕಾರ್ಯಕ್ರಮದಲ್ಲಿ ಸಂಸ್ಥೆಯ ಅಧ್ಯಕ್ಷ ದತ್ತು ಹಡಪದ, ಸಮಾಜ ಸೇವಕ ಶಿವಯೋಗೆಪ್ಪಾ ಎಸ್.ಬಿರಾದಾರ ಹಾಗೂ ವಿದ್ಯಾರ್ಥಿಗಳು ಇದ್ದರು.

# 3.10 ಲಕ್ಷ ರೂ.ಮೌಲ್ಯದ ನಗನಾಣ್ಯ ಕಳವು

ಕಲಬುರಗಿ:ಮನೆ ಬಾಗಿಲು ಕೊಂಡಿ ಮು–ರಿದು 3.10 ಲಕ್ಷ ರೂ.ಮೌಲ್ಯದ ನಗನಾಣ್ಯ ಕಳವು ಮಾಡಿರುವ ಘಟನೆ ಸೇಡಂ ರಸ್ತೆಯ ಸಿದ್ದೇಶ್ವರ ಕಾಲೋನಿಯಲ್ಲಿ ನಡೆದಿದೆ.

ಶಿವಪುತ್ರ ಕಾಡಾದಿಮಠ ಎಂಬುವವರ ಮನೆ ಬಾಗಿಲು ಕೊಂಡಿ ಮುರಿದು ಕಳ್ಳರು 80 ಸಾವಿರ ರೂ.ಮೌಲ್ಯದ 10 ಗ್ರಾಂ.ಬಂಗಾರದ ಒಂದು ಸುತ್ತುಂಗುರ, 80 ಸಾವಿರ ರೂ.ಮೌಲ್ಯದ 1 ಕೆಜಿ ಬೆಳ್ಳಿ ಸಾಮಾನು ಮತ್ತು 1.50 ಲಕ್ಷ ರೂ.ನಗದು ಸೇರಿ 3.10 ಲಕ್ಷ ರೂ.ಮೌಲ್ಯದ ನಗನಾಣ್ಯ ಕಳವು ಮಾಡಿದ್ದಾರೆ.

ಶಿವಪುತ್ರ ಕಾಡಾದಿಮಠ ಅವರು ತಮ್ಮ ಪತ್ನಿಯ ಆರೋಗ್ಯ ತಪಾಸಣೆಗೆಂದು ಮನೆಗೆ ಬೀಗ ಹಾಕಿಕೊಂಡು ಬೆಂಗಳೂರಿಗೆ ಹೋಗಿದ್ದಾಗ ಮನೆ ಕಳ್ಳತನವಾಗಿದೆ ಎಂದು ತಿಳಿದುಬಂದಿದೆ.

ಗಾಂಜಾ ಮಾರಾಟ: ಬಂಧನ ನಗರದ ಮಹ್ಮದ್ ರಫಿಕ್ ಚೌಕ್ ಹತ್ತಿರವಿರುವ ಪೀರ್ ಬಂಗಾಲಿ ಗ್ರೌಂಡ್ ಹತ್ತಿರ ಗಾಂಜಾ ಮಾರಾಟ ಮಾಡಲಾಗುತ್ತಿದೆ ಎಂಬ ಮಾಹಿತಿ ಮೇಲೆ ಸಬ್–ಅರ್ಬನ್ ಪೊಲೀಸ್ ಠಾಣೆ ಪಿಎಸ್ಐ ಶಶಿಕಲಾ, ಸಿಬ್ಬಂದಿಗಳಾದ ಚಂದ್ರಕಾಂತ, ಗುಂಡೇರಾಯ, ಶಶಿಕಾಂತ ಅವರು ದಾಳಿ ನಡೆಸಿ ಮುಸ್ಲಿಂ ಸಂಘದ ಅಬ್ದುಲ್ ರಜಾಕ್ ಎಂಬಾತನನ್ನು ಬಂಧಿಸಿ 13000 ರೂ.ಮೌಲ್ಯದ 130 ಗ್ರಾಂ.ಗಾಂಜಾ ಜಪ್ತಿ ಮಾಡಿದ್ದಾರೆ. ಸಬ್–ಅರ್ಬನ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.



# ಡ್ಯಾನ್ಸ್ ಒಲಿಂಪಿಯಾಡ್: ಕಲಬುರಗಿ ವಿದ್ಯಾರ್ಥಿನಿಯರ ಸಾಧನೆ

ಕಲಬುರಗಿ: ತಿರುಪತಿಯಲ್ಲಿ ನಡೆದ ಅಖಿಲ ಭಾರತ ಡ್ಯಾನ್ಸ್ ಒಲಿಂಪಿಯಾಡ್–2026ರಲ್ಲಿ ಕಲಬುರಗಿಯ ನೂಪುರ ಸಂಸ್ಕೃತಿ ನೃತ್ಯ ಮತ್ತು ಸಂಗೀತ ಸಂಸ್ಥೆಯ ವಿದ್ಯಾರ್ಥಿನಿಯರಾದ ಪ್ರಾಜಕ್ತಾ, ವಿದ್ಯಾ, ಸಾಧನಾ ಆಧ್ಯಾ, ಗ್ಯಾನವಿ, ಅದಿತಿ, ಸನ್ನಿಧಿ, ಸುಮನ, ಆದ್ಯಾ, ಶೃತಿ ನೃತ್ಯ ಸ್ಪರ್ಧೆಯಲ್ಲಿ ಭಾಗವಹಿಸಿ ಅತ್ಯುತ್ತಮ ಪ್ರದರ್ಶನ ನೀಡಿ ಬಹುಮಾನಗಳನ್ನು ಪಡೆದು ಜಿಲ್ಲೆಯ ಕೀರ್ತಿಯನ್ನು ಹೆಚ್ಚಿಸಿದ್ದಾರೆ.

ಈ ಸ್ಪರ್ಧೆಯಲ್ಲಿ ಭಾರತದ ವಿವಿಧ ರಾಜ್ಯಗಳಿಂದ 200ಕ್ಕೂ ಹೆಚ್ಚು ವಿದ್ಯಾರ್ಥಿಗಳು ಭಾಗವಹಿಸಿದ್ದರು. ಇಂತಹ ಪ್ರತಿಷ್ಠಿತ ಸ್ಪರ್ಧೆಯಲ್ಲಿ ಕಲಬುರಗಿಯ ವಿದ್ಯಾರ್ಥಿನಿಯರು ಬಹುಮಾನ ಗಳಿಸಿರುವುದು ಹೆಮ್ಮೆಯ ಸಂಗತಿಯಾಗಿದೆ.

ಅದೇ ಸಂದರ್ಭದಲ್ಲಿ ಸಂಸ್ಥೆಯ ನೃತ್ಯ ಶಿಕ್ಷಕಿ ಹಾಗೂ ಅಧ್ಯಕ್ಷರಾದ ವಿದುಷಿ ಸೌಖ್ಯ ಪ್ರವೀಣ್ ಅವರು "ಅತ್ಯುತ್ತಮ ಶಿಕ್ಷಕಿ ಪ್ರಶಸ್ತಿಗೆ ಭಾಜನರಾಗಿರುವುದು ಸಂಸ್ಥೆಗೆ ಮತ್ತೊಂದು ಹೆಮ್ಮೆಯ ವಿಷಯವಾಗಿದೆ. ಸಂಸ್ಥೆಯ ಅಧ್ಯಕ್ಷರು, ಪದಾಧಿಕಾರಿಗಳು, ಪಾಲಕರು ಹಾಗೂ ಕಲಾಭಿಮಾನಿಗಳು ಪ್ರಶಸ್ತಿ ವಿಜೇತ ವಿದ್ಯಾರ್ಥಿನಿಯರಿಗೆ ಮತ್ತು ವಿದುಷಿ ಸೌಖ್ಯ ಪ್ರವೀಣ್ ಅವರಿಗೆ ಹೃತ್ಪೂರ್ವಕ ಅಭಿನಂದನೆಗಳನ್ನು ಸಲ್ಲಿಸಿ, ಮುಂದಿನ ದಿನಗಳಲ್ಲಿ ಇನ್ನಷ್ಟು ಸಾಧನೆಗಳನ್ನು ಮಾಡುವಂತೆ ಶುಭ ಹಾರೈಸಿದ್ದಾರೆ.

# 2 ವರೆ ಕೋಟಿ ವೆಚ್ಚದಲ್ಲಿ ಸೇತುವೆ ನಿರ್ಮಾಣ ಕಾಮಗಾರಿಗೆ ಸಚಿವ ಡಾ.ಶರಣಪ್ರಕಾಶ್ ಪಾಟೀಲ್ ಚಾಲನೆ

ಸೇಡಂ: ತಾಲೂಕಿನ ಬೋಂದೇಪಲ್ಲಿ ಗ್ರಾಮದ ಬಳಿ 2ವರೆ ಕೋಟಿ ವೆಚ್ಚದಲ್ಲಿ ಸೇತುವೆ ನಿರ್ಮಾಣ ಕಾಮಗಾ–ರಿಗೆ ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯ ಅಭಿವೃದ್ಧಿ ಸಚಿವರಾದ ಡಾ.ಶರಣಪ್ರಕಾಶ್ ಪಾಟೀಲ್ ಊಡಗಿ ಚಾಲನೆ ನೀಡಿದರು. ಈ ವೇಳೆಯಲ್ಲಿ ತಹಸಿಲ್ದಾರಾದ ಶ್ರೀಯಾಂಕ ಧನಶ್ರೀ, ತಾಪಂ ಕಾರ್ಯನಿರ್ವಾಹಕ ಅಧಿಕಾರಿಗಳಾದ ಎಮ್.ಡಿ ಸೈಯ್ಯದ್, ಮಾಜಿ ಜಿಪಂ ಸದಸ್ಯರಾದ ದಾಮೋದರ ರೆಡ್ಡಿ, ಮೂದೋಳ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರಾದ ರವೀಂದ್ರ ನಂದಿಗಾಮ,ಸತೀಶ್ ರೆಡ್ಡಿ ಪಾಟೀಲ್ ರಂಜೋಳ, ಮಾಜಿ ಗ್ರಾಪಂ ಅಧ್ಯಕ್ಷರಾದ ಸದಾಶಿವ ರೆಡ್ಡಿ ಪಾಟೀಲ್, ಮಾಜಿ ಗ್ರಾಪಂ ಅಧ್ಯಕ್ಷರಾದ ಹೆಮ್ಲಾನಾಯಕ್,ಮೂದೋಳ ಮೈನಾರಿಟಿ ಅಧ್ಯಕ್ಷರಾದ ಬಾಬಾ ಲಿಂಗಪಲ್ಲಿ, ನರಸ್ಯಾ ನಾಯಕ್, ವೆಂಕಟೇಶ್ ಗೌಡ, ಗೋವರ್ಧನ ರೆಡ್ಡಿ ಪಾಟೀಲ್,ಹಣಮಂತರೆಡ್ಡಿ



ಪಾಟೀಲ್, ಲಕ್ಷ್ಮಿಕಾಂತ ಕುಲಕರ್ಣಿ ,ಶ್ರೀನಿವಾಸ್ ರೆಡ್ಡಿ,ಮನ್ಯನಾಯಕ, ಶಿವಕುಮಾರ್ ಸಜ್ಜನ ಸುಲಪೇಟ, ಹಾಗೂ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಲೋಕೋಪಯೋಗಿ ಇಲಾಖೆಯ ಉಪ ವಿಭಾಗದ ಎಇಇ ಶಿವಶರಣ ಬಿ. ಜೋವರ್ಗಿ ,ಪಿಡಬ್ಲ್ಯೂಡಿ ಇಲಾಖೆಯ ಸಹಾಯಕ ಇಂಜಿನಿಯರ್ ಗುರುರಾಜ ಸೇರಿದಂತೆ ಗ್ರಾಮದ ಹಿರಿಯರು ಯುವಕರು ಉಪಸ್ಥಿತ–ರಿದ್ದರು.

# ಗಾನಕೋಗಿಲೆ ಎಸ್. ಜಾನಕಿ ಅವರಿಗೆ ಭಾವಪೂರ್ಣ ನುಡಿನಮನ

ಕಲಬುರಗಿ: ಕನ್ನಡದ ಗಾನಕೋಗಿಲೆ ಶ್ರೀಮತಿ ಎಸ್. ಜಾನಕಿ ಅವರಿಗೆ ಶ್ರದ್ಧಾಂಜಲಿ ಹಾಗೂ ನುಡಿನಮನ ಕಾರ್ಯಕ್ರಮ ನಡೆಯಿತು.

ಸಪ್ತ ನೇಕಾರ ಸಂಘದ ಉಪಾಧ್ಯಕ್ಷ ಶ್ರೀನಿವಾಸ್ ಬಲಪುರ ಅವರು ಕನ್ನಡದ ಗಾನಮಾತೆ ಎಸ್. ಜಾನಕಿ ಅವರ ಭಾವಚಿತ್ರಕ್ಕೆ ಮಾಲಾರ್ಪಣೆ ಮಾಡಿ ಗೌರವ ಸಲ್ಲಿಸಿದರು. ಹಿರಿಯ ವಕೀಲರಾದ ಮೇಘನಾಥ ಹಿರೇಮಠ ಅವರು ನುಡಿನಮನ ಸಲ್ಲಿಸಿದರು.

ಕಾರ್ಯಕ್ರಮದ ಆರಂಭದಲ್ಲಿ ನ್ಯಾಯವಾದಿ ವಿನೋದಕುಮಾರ ಅವರು ಶ್ರದ್ಧಾಂಜಲಿ ಸಲ್ಲಿಸಿದರು, ಶಿಕ್ಷಕರಾದ ಮನೋಹರ ಜೈನ್ ಮಲಗತ್ತಿ ಹಾಗೂ ಗುರುಮಿಠಕಲನ ಶಿಕ್ಷಕ ಉಮಾಪತಿ ರೆಡ್ಡಿ ನುಡಿನಮನ ಸಲ್ಲಿಸಿದರು.

ಹಿರಿಯ ನಿವೃತ್ತ ಶಿಕ್ಷಕ ಮನೋಹರ ಜೈನ್ ಮಾತನಾಡಿ, "ಎಸ್. ಜಾನಕಿ ಅವರ ಆರು ದಶಕಗಳ ಸುದೀರ್ಘ ಸಂಗೀತ ಪಯಣ ಅವಿಸ್ಮರಣೀಯ. ತಮ್ಮ ಸುಮಧುರ ಕಂಠದ ಮೂಲಕ ಕೋಟ್ಯಂತರ ಕನ್ನಡಿಗರ ಮನದಲ್ಲಿ ಶಾಶ್ವತವಾಗಿ ನೆಲೆಸಿದ್ದಾರೆ" ಎಂದು ಸ್ಮ–ರಿಸಿದರು.ಶಿಕ್ಷಕ ಶರಣಬಸಪ್ಪ ನರೋಣಿ ಮಾತನಾಡಿ, "ಎಸ್. ಜಾನಕಿ ಅವರ ಧ್ವನಿ ಸರಸ್ವತಿ ದೇವಿಯ



ಅಪೂರ್ವ ಕೊಡುಗೆ. ಸುಮಾರು 20 ಭಾಷೆಗಳಲ್ಲಿ ಹಾಡಿರುವ ಅವರ ಗೀತೆಗಳು ಜನರ ಉಸಿರಿರುವವರೆಗೂ ಜೀವಂತವಾಗಿರುತ್ತವೆ. ಹುಟ್ಟು ನಿರ್ಧರಿತ, ಸಾವು ಖಚಿತ; ಆದರೆ ಇವೆರಡರ ನಡುವೆ ಸಮಾಜಕ್ಕೆ ಸಲ್ಲಿಸಿದ ಸೇವೆಯೇ ವ್ಯಕ್ತಿಯನ್ನು ಅಮರಗೊಳಿಸುತ್ತದೆ. ಸಂಗೀತ ಕ್ಷೇತ್ರಕ್ಕೆ ಅವರ ಕೊಡುಗೆ ಅನುಪಮ" ಎಂದು ನುಡಿನಮನ ಸಲ್ಲಿಸಿದರು. ಕಾರ್ಯಕ್ರಮದ ಕೊನೆಯಲ್ಲಿ ಸಾಮೂಹಿಕ ಮೌನಾಚರಣೆ ನಡೆಸಲಾಯಿತು. ಮಾಧ್ಯಮ ಮಿತ್ರ ರಾಜು ಕೊಷ್ಠಿ ವಂದಿಸಿದರು. ಸಂಗಣ್ಣ ಚೋರಗಸ್ತಿ ಭೀಮಳ್ಳಿ, ದೇಶಟ್ಟಿ ಆಂಜನೇಯ, ಸುರೇಶ ಘನಾತೆ, ಜೇ. ಶರಣಪ್ರಸಾದ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಪರಾರಿಯಾಗಿದ್ದ ಕೈದಿಗೆ ಗುಂಡಿಕ್ಕಿ ಸೆರೆ

ಕಲಬುರಗಿ:ನಗರದ ಜೇವರ್ಗಿ ರಸ್ತೆಯಲ್ಲಿರುವ ಕೇಂದ್ರ ಕಾರಾಗೃಹದಿಂದ ಪರಾರಿಯಾಗಿದ್ದ ಮೂವರು ಕೈದಿಗಳ ಪೈಕಿ ಒಬ್ಬನನ್ನು ಇಂದು ಬೆಳಗಿನ ಜಾವ ಪೊಲೀಸರು ಬಂಧಿಸಿದ್ದಾರೆ.

ಪೋಕ್ಸೋ ಪ್ರಕರಣದ ಆರೋಪದಲ್ಲಿ ಕೈದಿಯಾಗಿದ್ದ ಔರಾದ್ ತಾಲ್ಲೂಕಿನ ಸಂತಪುರ ಗ್ರಾಮದ ಸಂತೋಷ ಬಸಪ್ಪ ಮೇತ್ರೆ ( 28) ಬಂಧಿತ. ತಪ್ಪಿಸಿಕೊಂಡ ಕೈದಿಗಳ ಶೋಧಕ್ಕೆ 3 ತಂಡ ರಚಿಸಲಾಗಿತ್ತು. ಇಂದು ಬೆಳಗಿನ ಜಾವ

ಹುಮನಾಬಾದ್ ರಸ್ತೆ ಕಪನೂರ ಬಳಿ ಸಂತೋಷ ಬಸಪ್ಪ ಮೇತ್ರೆ ಇರುವುದನ್ನು ಖಚಿತಪಡಿಸಿಕೊಂಡ ಪೊಲೀಸರು ದಾಳಿ ನಡೆಸಿದ್ದಾರೆ.

ಫರತಾಬಾದ್ ಠಾಣೆ ಪೊಲೀಸ್ ಸಿಬ್ಬಂದಿ ಕಲ್ಯಾಣಕುಮಾರ್ ಮತ್ತು ವಿಶ್ವವಿದ್ಯಾಲಯ ಠಾಣೆ ಪ್ರಕಾಶ ಎಂಬುವವರ ಮೇಲೆ ಹರಿತವಾದ ಆಯುಧದಿಂದ ಪರಾರಿಕೈದಿ ಹಲ್ಲೆ ನಡೆಸಿದ್ದಾನೆ. ಫರತಾಬಾದ್ ಪಿಐ ಹುಸೇನ್ ಭಾಷಾ ಪರಾರಿಯಾಗಲು ಯತ್ನಿಸಿದ ಕೈದಿಯ ಕಾಲಿಗೆ ಗುಂಡು ಹಾರಿಸಿ ಅವನನ್ನು ಬಂಧಿಸುವಲ್ಲಿ ಯಶಸ್ವಿಯಾಗಿದ್ದಾರೆ.

ಗಾಯಗೊಂಡ ಪೊಲೀಸ್ ಸಿಬ್ಬಂದಿ ಮತ್ತು ಕೈದಿಯನ್ನು ಚಿಕಿತ್ಸೆಗಾಗಿ ಜಿಮ್ಸ್ ಆಸ್ಪತ್ರೆಗೆ ಸೇರಿಸಲಾಗಿದೆ ಎಂದು ನಗರ ಪೊಲೀಸ್ ಕಮೀಷನರ್ ಡಾ.ಶರಣಪ್ಪ ಎಸ್ ಡಿ, ಎಸಿಪಿ ಶಾಲೂ ಅವರು ತಿಳಿಸಿದ್ದಾರೆ.ಘಟನೆಯ ಹಿನ್ನೆಲೆ: ನಿನ್ನೆ ಬೆಳಿಗ್ಗೆ ಮೂವರು ಕೈದಿಗಳಾದ ಬೀದರ್ ಜಿಲ್ಲೆಯ ಬಸವ ಕಲ್ಯಾಣ ತಾಲೂಕಿನ ಇಸ್ಲಾಂಪುರದ ಮಸ್ತಾನ್, ಔರಾದ್ ತಾಲ್ಲೂಕಿನ ಸಂತಪುರ ಗ್ರಾಮದ ಸಂತೋಷ ಬಸಪ್ಪ ಹಾಗೂ ಬೀದರ್ ತಾಲೂಕಿನ

ಬಕ್ಕಚೌಡಿ ಗ್ರಾಮದ ಸಾಗರ ಭೀಮರಾಯ ಕಾರಾಗೃಹದ ಬ್ಯಾರೆಕ್ ನಂ 5 ರಿಂದ ಪರಾರಿಯಾಗಿದ್ದರು.

ಈ ಮೂವರು ಕೈದಿಗಳಲ್ಲಿ ಇಬ್ಬರು ಪೋಕ್ಸೊ, ಒಬ್ಬ ಕೊಲೆ ಪ್ರಕರಣದಲ್ಲಿ ಜೀವಾವಧಿ ಶಿಕ್ಷೆ ಅನುಭವಿಸುತ್ತಿದ್ದರು

ಪ್ರಾಥಮಿಕ ಮಾಹಿತಿಯ ಪ್ರಕಾರ, ಕೈದಿಗಳು ಜೈಲಿನ ಭದ್ರತಾ ಗೋಡೆ ಹಾರಿ ಪರಾರಿಯಾಗಿದ್ದಾರೆ ಎನ್ನಲಾಗಿದೆ. ಘಟನೆ ಬೆಳಕಿಗೆ ಬರುತ್ತಿದ್ದಂತೆ ಜೈಲು ಅಧಿಕಾರಿಗಳು ಹಾಗೂ ಪೊಲೀಸರು ಸ್ಥಳಕ್ಕೆ ಧಾವಿಸಿ ಪರಿಶೀಲನೆ ನಡೆಸಿದ್ದಾರೆ.

ಈ ಘಟನೆ ಫರಹತಾಬಾದ್ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ನಡೆದಿದ್ದು, ಪರಾರಿಯಾದ ಕೈದಿಗಳ ಪತ್ತೆಗಾಗಿ ವಿಶೇಷ ತಂಡಗಳನ್ನು ರಚಿಸಿ ವ್ಯಾಪಕ ಶೋಧ ಕಾರ್ಯಾಚರಣೆ ಕೈಗೊಳ್ಳಲಾಗಿದೆ ಎಂದು ಮೂಲಗಳು ತಿಳಿಸಿವೆ.

ಪೋಕ್ಸೊ ಪ್ರಕರಣದಲ್ಲಿ ಬಂಧಿಸಲ್ಪಟ್ಟಿದ್ದ ಆರೋಪಿಯೊಬ್ಬ ಪೊಲೀಸರಿಗೆ ಚಳ್ಳೆ ಹಣ್ಣು ತಿನಿಸಿ ಅಫಜಲಪುರ ಪೊಲೀಸ್ ಠಾಣೆಯಿಂದ ಪರಾರಿಯಾಗಿದ್ದ ಘಟನೆ ಬೆನ್ನಲ್ಲೇ ಈಗ ಕೇಂದ್ರ ಕಾರಾಗೃಹದಿಂದ ಮೂವರು ಕೈದಿಗಳು ಪರಾರಿಯಾಗಿರುವುದು ಪೊಲೀಸ್ ಇಲಾಖೆಗೆ ತೀವ್ರ ಮುಜುಗರ ತಂದಿಟ್ಟಿದೆ. ಸ್ವತಃ ಗೃಹ ಸಚಿವರ ತವರಿನಲ್ಲೇ ಇಂತಹ ದೊಡ್ಡ ಲೋಪಗಳು ಪದೇ ಪದೇ ನಡೆಯುತ್ತಿರುವುದು ಸಾರ್ವಜನಿಕ ವಲಯದಲ್ಲಿ ತೀವ್ರ ಚರ್ಚೆಗೆ ಗ್ರಾಸವಾಗಿದೆ.

# ಎಲ್ಲರೂ ಕೌಶಲ ಹೊಂದುವುದು ವಿಶ್ವಸಂಸ್ಥೆಯ ಗುರಿ

ಕಲಬುರಗಿ : ಎಲ್ಲಾ ವರ್ಗದವರಿಗೂ ಸಂಪೂರ್ಣ ಶಿಕ್ಷಣ, ತಾಂತ್ರಿಕ ಶಿಕ್ಷಣ ಮತ್ತು ವೃತ್ತಿಪರ ಕೌಶಲ್ಯ ಒದಗಿಸುವ ಗುರಿಯನ್ನು ವಿಶ್ವ ಸಂಸ್ಥೆ 2030ರಲ್ಲಿ ಹೊಂದಿದೆ . ಇದನ್ನು ಸಾಧಿಸಲು ಅದುವ ತನ್ನ ಸದಸ್ಯ ರಾಷ್ಟ್ರಗಳು ಕೈಜೋಡಿಸಬೇಕು ಮತ್ತು ಯುವ ಜನತೆಗೆ ಪೂರಕ ವಾತಾವರಣ ನಿರ್ಮಿಸಬೇಕು ಎಂದು ವಿಶ್ವಸಂಸ್ಥೆಯು ತಿಳಿಸಿದ್ದು, ಇದಕ್ಕೆ ಎಲ್ಲರ ಸಹಕಾರ ಅಗತ್ಯವಾಗಿದೆ ಎಂದು ಉಪನ್ಯಾಸ ಎಚ್.ಬಿ.ಪಾಟೀಲ್ ಹೇಳಿದರು.

ನಗರದ ಆಳಂದ ರಸ್ತೆಯ ಸಂತೋಷ ಕಾಲನಿ ಕ್ರಾಸ್ ಸಮೀಪವಿರುವ 'ರಿಪಬ್ಲಿಕ್ ಸ್ಪೋಕನ್ ಇಂಗ್ಲೀಷ್ ಅಕಾಡೆಮಿ'ಯಲ್ಲಿ 'ಬಸವೇಶ್ವರ ಸಮಾಜ ಸೇವಾ ಬಳಗ'ದ ವತಿಯಿಂದ ಮಂಗಳವಾರ ಜರುಗಿದ "ವಿಶ್ವ ಯುವ ಕೌಶಲಗಳ ದಿನಾಚರಣೆ"ಯಲ್ಲಿ ಅವರು ಮಾತನಾಡುತ್ತಿದ್ದರು. ವಿಶ್ವಸಂಸ್ಥೆಯು 2014ರ ಜುಲೈ–15ರಂದು ತನ್ನ ಸಾಮಾನ್ಯ ಸಭೆಯಲ್ಲಿ ಈ ದಿನವನ್ನು ಘೋಷಿಸಿತು. ಅಂದಿನಿಂದ ಪ್ರತಿ ವರ್ಷ 'ವಿಶ್ವ ಯುವ ಕೌಶಲ್ಯ ದಿನ'ವನ್ನು ಆಚರಣೆ ಮಾಡಲಾಗುತ್ತಿದೆ.




ಯುವಜನತೆಯಲ್ಲಿ ಕೌಶಲ್ಯ ಅಭಿವೃದ್ಧಿ ಮತ್ತು ಕೌಶಲ್ಯದ ಪ್ರಾಮುಖ್ಯತೆಯನ್ನು ಸಾರುವ ಉದ್ದೇಶವಾಗಿದೆ ಎಂದರು.

ಯುವಕರಲ್ಲಿ ಕೌಶಲಗಳನ್ನು ಬೆಳೆಸಬೇಕು ಎಂಬ ಉದ್ದೇಶದಿಂದ ಸರ್ಕಾರವು 'ಪ್ರಧಾನ ಮಂತ್ರಿ ವಿಕಾಸ್ ಯೋಜನೆ', 'ಪ್ರಧಾನ ಮಂತ್ರಿ ಕೌಶಲ ಕೇಂದ್ರಗಳ ಸ್ಥಾಪನೆ', 'ಕುಶಲಕರ್ಮಿ ತರಬೇತಿ ಯೋಜನೆ', 'ಸುಧಾರಿತ ವೃತ್ತಿಪರ ತರಬೇತಿ ಯೋಜನೆ', 'ಕೈಗಾರಿಕಾ ಮೌಲ್ಯ ವರ್ಧನೆಗಾಗಿ ಕೌಶಲ್ಯ ಸಾಮರ್ಥ್ಯ ಯೋಜನೆ'ಗಳನ್ನು ಜಾರಿಗೊಳಿಸಿದೆ. ಕೌಶಲಗಳಿದ್ದರೆ ಮಾತ್ರ ವೃತ್ತಿಪರ ಜೀವನದಲ್ಲಿ ತ್ವರಿತವಾಗಿ ಯಶಸ್ಸನ್ನು ಸಾಧಿಸಬಹುದು. ಆದ್ದರಿಂದ ಎಲ್ಲರು ಕೌಶಲಗಳನ್ನು ಅಳವಡಿಸಿಕೊಳ್ಳಬೇಕಾದದ್ದು ಇಂದಿನ ಅಗತ್ಯತೆಯಾಗಿದೆ ಎಂದು ನುಡಿದರು.


# ಸಮಸ್ಯೆಗಳ ಕುರಿತು ಸದಾ ಜಾಗರೂಕರಾಗಿರೋಣ

ಮನದಂಗಳ

■ ಉದಯರಶ್ಮಿ ದಿನಪತ್ರಿಕೆ




ಮನುಷ್ಯನು ಜೀವನದಲ್ಲಿ ಸದಾ ಖುಷಿಯಾಗಿರುವುದನ್ನೇ ಇಷ್ಟಪಡುತ್ತಾನೆ. ಅಚಾನಕ್ಕಾಗಿ ಏನಾದರೂ ಸಹಿಸಲು ಸಾಧ್ಯವಾಗದಂತಹ ತೊಂದರೆ ಯಾ ಸಮಸ್ಯೆ ಬಂದಲ್ಲಿ ತಕ್ಷಣ ಅದರಿಂದ ವಿಚಲಿತನಾಗುತ್ತಾನೆ ಮತ್ತು ಅದರಿಂದ ಹೊರಬರಲು ಪ್ರಯತ್ನಿಸುತ್ತಾನೆ. ಆದರೆ ಅದೇ ಸಮಸ್ಯೆಯು ತೀರಾ ನಿಧಾನ ಗತಿಯಲ್ಲಿ ಬಂದಾಗ ಮನುಷ್ಯನು ಆ ಸಮಸ್ಯೆಯಿಂದ ಹೊರಬರಲು ಪ್ರಯತ್ನಿಸದೇ ಆ ಸಮಸ್ಯೆಗೆ ನಿಧಾನವಾಗಿ ಹೊಂದಿಕೊಂಡು ಹೋಗಿ ಕೊನೆಗೊಂದು ದಿನ ಆ ಸಮಸ್ಯೆಯ ಸುಳಿಯಲ್ಲಿ ಸಿಲುಕಿಕೊಂಡು ಅದರಲ್ಲೇ ತನ್ನ ಪ್ರಾಣವನ್ನು ಬಿಡುತ್ತಾನೆ. ಇದು ಒಂದು ಕಪ್ಪೆಯನ್ನು ನಿಧಾನವಾಗಿ ಜೀವಂತವಾಗಿ ಕುದಿಸುವುದನ್ನು ವಿವರಿಸುವಂತಹ ಕಥೆಯಾಗಿದೆ. 'ಒಂದು ಜೀವಂತವಾಗಿರುವ ಕಪ್ಪೆಯನ್ನು ಇದ್ದಕ್ಕಿದ್ದಂತೆ ಕುದಿಯುತ್ತಿರುವ ನೀರಿನೊಳಗೆ ಹಾಕಿದರೆ ಅದು ತಕ್ಷಣವೇ ಅದರಿಂದ ಹಾರಿ ಹೊರಗೆ ಹೋಗುತ್ತದೆ. ಆದರೆ ಅದೇ ಕಪ್ಪೆಯನ್ನು ಶುದ್ಧವಾದ ಮತ್ತು ತಣ್ಣನೆಯ ನೀರಿನಲ್ಲಿ ಹಾಕಿದರೆ ಅದು ಅದರೊಳಗಡೆಯೇ ಹಾಯಾಗಿರುತ್ತದೆ, ಅದು ಸಹಜವೂ ಹೌದು. ಈಗ ಅದೇ ನೀರಿನ ಪಾತ್ರೆಗೆ ಬೆಂಕಿಯನ್ನು ಹಚ್ಚಿ ನೀರನ್ನು ನಿಧಾನವಾಗಿ ಕುದಿಸಿದರೆ ಅದು ತಕ್ಷಣಕ್ಕೆ ಹಾರಿ ಹೋಗುವುದಿಲ್ಲ. ಅಂದರೆ ಅದು ತನಗೆ ಬಂದೊದಗಿರುವ ಅಪಾಯವನ್ನು ತಕ್ಷಣಕ್ಕೆ ಗ್ರಹಿಸುವುದಿಲ್ಲ ಮತ್ತು ನೀರಿನ ಬಿಸಿಗೆ ಹೊಂದಿಕೊಳ್ಳುತ್ತಾ ಹೋಗುತ್ತದೆ. ಅದೇ ನೀರು ಇನ್ನಷ್ಟು ಬಿಸಿಯಾಗುತ್ತಾ ಹೋಗಿ



ಕುದಿಯುವ ಬಿಂದುವನ್ನು ತಲುಪಿದಾಗಲೂ ಕಪ್ಪೆಯ ಹೊಂದಿಕೊಂಡು ಹೋಗುವ ಮನಃಸ್ಥಿತಿಯಿಂದಾಗಿ ಕೊನೇಯ ಕ್ಷಣದಲ್ಲಿ ಪಾತ್ರೆಯಿಂದ ಹೊರಬರಲಾರದೇ ಅಲ್ಲೇ ಉಳಿದು ಸಾಯುತ್ತದೆ.'

ಮನುಷ್ಯನೂ ಸದಾ ಕಪ್ಪೆಯ ಮನಸ್ಥಿತಿಯ ರೀತಿಯಲ್ಲೇ ಇರುತ್ತಾನೆ. ಮನುಷ್ಯ ನಿಧಾನವಾಗಿ ಬರುತ್ತಿರುವ ಬಹು ದೊಡ್ಡ ಗಂಡಾಂತರಗಳನ್ನು ಗುರುತಿಸುವಲ್ಲಿ ವಿಫಲನಾಗಿ ಆ ಸಮಸ್ಯೆಯು ಬೃಹದಾಕಾರಕ್ಕೆ ಬೆಳೆದು ಅದು ಆತನ ಜೀವಕ್ಕೇ ಕುತ್ತಾಗುತ್ತದೆ. ಆದರೆ ಅದೇ ಸಮಸ್ಯೆಯನ್ನು ಪ್ರಾರಂಭದ ಹಂತದಲ್ಲೇ ಗುರುತಿಸಿ ಅದ-ರಿಂದ ಹೊರಬಂದಾತ ಅಥವಾ ಪರಿಹ-ರಿಸಿಕೊಂಡಾತ ಸಮಸ್ಯೆಯ ಸುಳಿಯಲ್ಲಿ ಸಿಲುಕಿಕೊಂಡು ಸಾಯಲಾರ. ಕಪ್ಪೆಯ ಕಥೆಯಂತೆ ಸಮಸ್ಯೆಯು ಬಂದಿದೆ ಆದರೆ ಅದು ಅಷ್ಟೊಂದು ಗಂಭೀರವಲ್ಲ ಎನ್ನುವ ಮನಃಸ್ಥಿತಿಗೆ ಯಾವಾಗ ನಾವು ಬರುತ್ತೇವೋ ಅಂತಹ ಸಂದರ್ಭದಲ್ಲಿ ಸಮಸ್ಯೆ ಗಂಭೀರ ಸ್ಥಿತಿಗೆ ತಲುಪಿದಾಗ ಅದಕ್ಕೆ ಪರಿಹಾರವನ್ನು ಕಂಡುಕೊಳ್ಳಲಾರದೆ ಅದರೊಳಗೇ ಸಿಲುಕಿ ಸಾಯುವ ಪರಿಸ್ಥಿತಿ ಬರುತ್ತದೆ. ಕುದಿಯುವ ನೀರಿನಲ್ಲಿ ಇರುವ ಕಪ್ಪೆಯ ಸ್ಥಿತಿಯ ಕಥೆಯನ್ನು ಸಾಮಾನ್ಯವಾಗಿ ಮನುಷ್ಯನ ಜೀವನದಲ್ಲಿ ಬಂದೊದಗುವ ವಿವಿಧ ಸನ್ನಿವೇಷಗಳು ಮತ್ತು ಅವುಗಳನ್ನು ಎದುರಿಸುವ ಗುಣಕ್ಕೆ ಉದಾಹರಣೆಯಾಗಿದೆ.

ಸಮಸ್ಯೆಗಳಿಗೆ ಹೊಂದಿಕೊಂಡು ಸಾಗುವಂತಹ ಗುಣವು ಅಭಿವೃದ್ಧಿಯ ಪಥ-'ದೆಡೆಗೆ ಸಾಗುವ ಮನೋಭಾವವಿರುವ ವ್ಯಕ್ತಿಯ ದೃಷ್ಟಿಯಿಂದ ಒಳ್ಳೆಯದಲ್ಲ. ಸಮಸ್ಯೆ ಬರಬಹುದೆಂಬ ಸುಳಿವು ದೊರೆತಾಕ್ಷಣ ಅದನ್ನು ಗುರುತಿಸಿ ಪರಿಹ-ರಿಸಿಕೊಂಡರೆ ಬಾಳು ಬಂಗಾರವಾಗುತ್ತದೆ. ನಿಧಾನವಾಗಿ ಬರುವ ಅಪಾಯಗಳಿಗೆ ಹೊಂದಿಕೊಂಡು ಹೋಗುವ ಗುಣವು ನಮ್ಮಲ್ಲೂ ಇದ್ದು, ನಿಧಾನವಾಗಿ ನಮ್ಮ ಅರಿವಿಗೇ ಬಾರದಂತೆ ಆಗುವ ವಿವಿಧ ಬದಲಾವಣೆಗಳಿಂದ ಕೊನೆಗೆ ಅನಪೇಕ್ಷಿತವಾದ ಪರಿಣಾಮಗಳು ಆಗದಂತೆ ಎಚ್ಚರದಿಂದ ಇರಬೇಕು.

ಲೇಖನ
– ಸಂತೋಷ್ ರಾವ್
ಪೆರ್ಮುಡ.
ಪಟ್ರಮೆ ಗ್ರಾಮ ಮತ್ತು ಅಂಚೆ
ಬೆಳ್ತಂಗಡಿ ತಾಲೂಕು
ದ.ಕ ಜಿಲ್ಲೆ–574198
ದೂ:9742884160



# ಅನಗತ್ಯ ಗರ್ಭಧಾರಣೆಯಿಂದ ತಾಯಿ ಸುರಕ್ಷಿತ, ಜನಸಂಖ್ಯೆ ಹೆಚ್ಚಳಕ್ಕೆ ಕಡಿವಾಣ : ಸೀತಾ ಬಡಿಗೇರ




ಕಲಬುರಗಿ:ನಗರದ ಜಿಮ್ಸ್ ಜಿಲ್ಲಾ ಆಸ್ಪತ್ರೆಯ ಪ್ರಾಂಗಣದಲ್ಲಿ ವಿಶ್ವ ಜನಸಂಖ್ಯೆ ದಿನಚರಣೆಯನ್ನು ಹೆ-ರಿಗೆ ಮತ್ತು ಸ್ತ್ರೀ ಸಂತಾನೋತ್ಪತ್ತಿ ಕೇಂದ್ರದ ಆರೋಗ್ಯಕ್ಕೆ ಸಂಬಂಧಿಸಿದ ವೈದ್ಯಕೀಯ ವಿಭಾಗವಾಗಿದಲ್ಲಿ ಹೊರ ರೋಗಿಗಳ ಗರ್ಭಿಣಿಯಾರಿಗೆ ಹಾಗೂ ಆರೈಕೆ ಸಹಾಯಕರಿಗೆ, ಆರೋಗ್ಯಕರ ಸಮುದಾಯದಲ್ಲಿ ಗರ್ಭಧಾರಣೆಗಳು ಮತ್ತು ಮಕ್ಕಳ ಜನನದ ನಡುವೆ ಸಮರ್ಪಕ ಅಂತರ ಕಾಪಾಡಿಕೊಳ್ಳುವುದರಿಂದ ತಾಯಿ ಹಾಗೂ ಮಕ್ಕಳ ಆರೋಗ್ಯ ಸುಧಾರಿಸಿ, ಅನಗತ್ಯ ಗರ್ಭಧಾರಣೆಗಳನ್ನು ತಡೆಯಲು ಸಹಾಯವಾಗುತ್ತದೆ ಎಂದು ನಸಿರ್‌ಂಗ್ ಆಫೀಸರ್ ಸೀತಾ ಬಡಿಗೇರ ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಮ್ಸ್ ಜಿಲ್ಲಾ ಆಸ್ಪತ್ರೆ. ಸಹಯೋಗದಲ್ಲಿ ವಿಶ್ವ ಜನಸಂಖ್ಯೆ ದಿನದ ಅರಿವು ಕಾರ್ಯಕ್ರಮದಲ್ಲಿ ಮಾತಾಡಿದ ಅವರು ವಿಶ್ವದ ಜನಸಂಖ್ಯೆ 1987 ರ ಜುಲೈ 11 ರಂದು 5 ಬಿಲಿಯನ್ ತಲುಪಿದ ಸಂದರ್ಭವನ್ನು ನೆನಪಿಸಿ, 1989 ರಲ್ಲಿ ಆಯೋಜಕರು ಈ ದಿನವನ್ನು ಅಧಿಕೃತವಾಗಿ

ಆರೋಗ್ಯಕರ ಜೀವನ ನಡೆಸಲು ಗರ್ಭ ನಿರೋಧಕ ಶಸ್ತ್ರಚಿಕಿತ್ಸೆ ಮಾಡಿಸುವುದರಿಂದ ತಾಯಿ ಹಾಗೂ ಮಕ್ಕಳ ನಡುವಿನ ಆರೋಗ್ಯಕರ ಅಂತರ ಕಾಪಾಡಿಕೊಳ್ಳುವುದರಿಂದ ತಾಯಿ ಮತ್ತು ಮಕ್ಕಳ ಆರೋಗ್ಯ ವೃದ್ಧಿಸುವುದರೊಂದಿಗೆ ಅನಗತ್ಯ ಗರ್ಭಧಾರಣೆಗಳನ್ನು ತಡೆಗಟ್ಟಬಹುದು ಎಂದು ತಿಳಿಸಿದರು. ನಂತರ ಪ್ಲಸ್ ಸಮಾಲೋಚಕಿ ಗೀತಾ ಕುಂಬಾರ ಅವರು ಮಾತನಾಡುತ್ತ, ವಿಶ್ವ ಜನಸಂಖ್ಯಾ ದಿನವು ಕುಟುಂಬ ಯೋಜನೆ, ಆರೋಗ್ಯ ಸೇವೆಗಳು, ಲಿಂಗ ಸಮಾನತೆ, ಬಾಳಿಕೆ ಗುಣಮಟ್ಟ ಮತ್ತು ಉಸಿರಾಟದ ಸಂಪನ್ಮೂಲಗಳ ಮೇಲಿನ ಒತ್ತಡದಂತಹ ವಿಷಯಗಳ ಮೇಲೆ ಜಾಗೃತಿ ಮೂಡಿಸುತ್ತದೆ ಎಂದು ತಿಳಿಸಿದರು. ಜಿಲ್ಲಾ ಸಕಾಲಜಿಸ್ಟ್ ಕೌನ್ಸಿಲರ್ ಮಂಜುನಾಥ ಕಂಬಾಳಿಮಠ್ ಅವರು ಮಾತನಾಡುತ್ತ ತಂಬಾಕು ಮತ್ತು ಧೂಮಾಪಾನ ಸೇವನೆ ದುಷ್ಪಪರಿಣಾಮದಿಂದ ಬಾಣಂತಿಯರ ಮೇಲೆ ಪ್ರಭಾವ ಬೀರುತ್ತಿದೆ ಅದರಿಂದ ಉತ್ತಮ ಹಾಗೂ ಒಳ್ಳೆಯ ಹವ್ಯಾಸ ಬೆಳೆಸಿಕೊಳ್ಳಿ. ಹುಟ್ಟುವ ಮಗು ಆರೋಗ್ಯವಾಗಿರುತ್ತದೆ ಹಾಗೆ ಐಇಸಿ ಕರ ಪತ್ರನೀಡಿ ತಿಳಿಸಿದರು. ಕಾರ್ಯಕ್ರಮದಲ್ಲಿ ಪ್ರಮುಖರಾದ ಓಬಿಜಿ ಸೋಶಿಯಲ್ ವರ್ಕರ್ ದೀಪಾಶ್ರೀ ಸಿಂಗೆ, ನಸಿರ್‌ಂಗ್ ಆಫೀಸರ್ ವಸಂತಾ , ನಸಿರ್‌ಂಗ್ ಉಪನ್ಯಾಸಕ ಬಿಭಿಮಾ ಭಗ್ವಾನ್, ಆರೋಗ್ಯ ಇಲಾಖೆ ಸಿಬ್ಬಂದಿಗಳು ಹಾಗೂ ಬಾಣಂತಿ ಆರೈಕೆದಾರರು ಭಾಗವಹಿಸಿದ್ದರು.

# ಕಲಬುರಗಿ ನಗರ ಅಭಿವೃದ್ಧಿ: ಸಚಿವ ಯತೀಂದ್ರ ಸಿದ್ದರಾಮಯ್ಯಗೆ ಕೆಕೆಸಿಸಿಐ ಮನವಿ



ಕಲಬುರಗಿ:ಈಚೆಗೆ ಆಗಮಿಸಿದ್ದ ನಗರಾಭಿವೃದ್ಧಿ ಸಚಿವ ಯತೀಂದ್ರ ಸಿದ್ದರಾಮಯ್ಯ ಅವರನ್ನು ಕಲ್ಯಾಣ ಕರ್ನಾಟಕ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆ (ಕೆಕೆಸಿಸಿಐ) ಅಧ್ಯಕ್ಷ ಶರಣಬಸಪ್ಪ ಎಂ.ಪಪ್ಪಾ, ಗೌರವ ಕಾರ್ಯದರ್ಶಿ ಶಿವರಾಜ್ ವಿ.ಇಂಗಿನಶೆಟ್ಟಿ ಹಾಗೂ ವ್ಯವಸ್ಥಾಪನಾ ಸಮಿತಿ ಸದಸ್ಯ ಸಂತೋಷ್ ಸುರೇಶ್ ನಂದ್ಯಾಳ ಅವರು ಭೇಟಿ ಮಾಡಿ, ನಗರದ ಅಭಿವೃದ್ಧಿ ಹಾಗೂ ವ್ಯಾಪಾರ ವಹಿವಾಟಿಗೆ ಸಂಬಂಧಿಸಿದ ವಿವಿಧ ಪ್ರಮುಖ ಸಮಸ್ಯೆಗಳ ಕುರಿತು ಸಮಗ್ರ ಮನವಿ ಪತ್ರ ಸಲ್ಲಿಸಿದರು.

ಮನವಿಯಲ್ಲಿ ನಗರದ ಪ್ರಮುಖ ವ್ಯಾಪಾರ ಕೇಂದ್ರವಾದ ಸೂಪರ್ ಮಾರ್ಕೆಟ್ ಪ್ರದೇಶದಲ್ಲಿ ಬಹು ಮಹಡಿ ವಾಹನ ನಿಲುಗಡೆ ಕೇಂದ್ರ ನಿರ್ಮಿಸುವಂತೆ ಒತ್ತಾಯಿಸಲಾಯಿತು. ಸೂಪರ್ ಮಾರ್ಕೆಟ್ ಪ್ರದೇಶದಲ್ಲಿ ವಾಹನ ನಿಲುಗಡೆಗೆ ಸಮರ್ಪಕ ವ್ಯವಸ್ಥೆ ಇಲ್ಲದ ಕಾರಣ ಸಂಚಾರ ದಟ್ಟಣೆ, ರಸ್ತೆ ಬದಿಯಲ್ಲಿ ವಾಹನಗಳ ಅಸ್ತವ್ಯಸ್ತ ನಿಲುಗಡೆಯಿಂದ ವ್ಯಾಪಾರ ಚಟುವಟಿಕೆಗೆ ತೊಂದರೆಯಾಗುತ್ತಿದೆ. ನಗರದ ಭವಿಷ್ಯದ ಅಗತ್ಯಗಳನ್ನು ಗಮನದಲ್ಲಿಟ್ಟುಕೊಂಡು ಈ ಯೋಜನೆಯನ್ನು ಆದ್ಯತೆಯ ಮೇರೆಗೆ ಕೈಗೊಳ್ಳುವಂತೆ ಮನವಿ ಮಾಡಲಾಯಿತು.

ಅದೇ ರೀತಿ, ಆಸ್ತಿ ತೆರಿಗೆ ವ್ಯವಸ್ಥೆಯನ್ನು ಮರುಪ-ರಿಶೀಲಿಸಿ ನ್ಯಾಯಸಮ್ಮತ ಹಾಗೂ ವೈಜ್ಞಾನಿಕ ತೆರಿಗೆ ಪದ್ಧತಿಯನ್ನು ಜಾರಿಗೆ ತರಬೇಕು ಎಂದು ಕೋರಲಾಯಿತು. ಜಮೀನಿನ ಮಾರುಕಟ್ಟೆ ಮೌಲ್ಯವನ್ನು ಮಾತ್ರ ಆದ-ಾರವಾಗಿರಿಸದೇ, ಕಟ್ಟಡದ ಬಳಕೆ, ವಿಸ್ತೀರ್ಣ ಹಾಗೂ ಲಭ್ಯವಿರುವ ನಾಗರಿಕ ಸೌಲಭ್ಯಗಳ ಆಧಾರದ ಮೇಲೆ ತೆರಿಗೆ ನಿಗದಿಪಡಿಸಬೇಕೆಂದು ಮನವಿ ಸಲ್ಲಿಸಲಾಯಿತು.

ಇ-ಖಾತಾ ವ್ಯವಸ್ಥೆಯನ್ನು ಇನ್ನಷ್ಟು ಸರಳಗೊಳಿಸಿ, ಒಮ್ಮೆ ಇ-ಖಾತಾ ನೀಡಿದ ಬಳಿಕ ಅದು ಶಾಶ್ವತವಾಗಿ ಡಿಜಿಟಲ್ ದಾಖಲೆಗಳಲ್ಲಿ ಲಭ್ಯವಿರುವಂತೆ ವ್ಯವಸ್ಥೆ ರೂಪಿಸಬೇಕು. ಸಾರ್ವಜನಿಕರು ಅನಗತ್ಯವಾಗಿ ಮತ್ತೆ ಮತ್ತೆ ಅರ್ಜಿ ಸಲ್ಲಿಸುವ ಪರಿಸ್ಥಿತಿ ತಪ್ಪಿಸಬೇಕು ಎಂದು ಕೆಕೆಸಿಸಿಐ ಒತ್ತಾಯಿಸಿತು.ಇದರೊಂದಿಗೆ, ಹಳೆಯ ಕಟ್ಟಡಗಳಿಗೆ ಆಕ್ಯುಪೆನ್ಸಿ ಪ್ರಮಾಣಪತ್ರ ಕಡ್ಡಾಯ ನಿಯಮಕ್ಕೆ ವಿನಾಯಿತಿ ನೀಡಬೇಕು ಎಂದು ಮನವಿ ಮಾಡಲಾಯಿತು. ಪ್ರಸ್ತುತ ನಿಯಮ ಜಾರಿಗೆ ಬರುವುದಕ್ಕಿಂತ ಮುಂಚೆಯೇ ನಿರ್ಮಾಣಗೊಂಡಿರುವ ಸಾವಿರಾರು ಮನೆಗಳು ಹಾಗೂ ವಾಣಿಜ್ಯ ಕಟ್ಟಡಗಳ ಮಾಲೀಕರು ನೀರಿನ ಸಂಪರ್ಕ, ವಿದ್ಯುತ್ ಸಂಪರ್ಕ, ಇ-ಖಾತಾ, ವ್ಯಾಪಾರ ಪರವಾನಗಿ ಸೇರಿದಂತೆ ವಿವಿಧ ನಾಗರಿಕ ಸೇವೆಗಳನ್ನು ಪಡೆಯಲು ಅನಗತ್ಯ ತೊಂದರೆ ಅನುಭವಿಸುತ್ತಿದ್ದಾರೆ. ಇಂತಹ ಕಟ್ಟಡಗಳಿಗೆ ಒಂದು ಬಾರಿ ವಿನಾಯಿತಿ ನೀಡಿ ಸಮಸ್ಯೆಗೆ ಶಾಶ್ವತ ಪರಿಹಾರ ಕಲ್ಪಿಸಬೇಕೆಂದು ಸರ್ಕಾರವನ್ನು ಕೋರಲಾಯಿತು.

ಇದಲ್ಲದೆ, ಸೂಪರ್ ಮಾರ್ಕೆಟ್ ಸೇರಿದಂತೆ ಪ್ರಮುಖ ವಾಣಿಜ್ಯ ಪ್ರದೇಶಗಳಲ್ಲಿನ ಪಾದಚಾರಿ ಮಾರ್ಗಗಳ ಅತಿಕ್ರಮಣ ತೆರವು, ಯೋಜಿತ ಹಾಕರ್ ವಲಯಗಳ ಅಭಿವೃದ್ಧಿ, ನಗರದ ಪ್ರಮುಖ ವಾಣಿಜ್ಯ ಪ್ರದೇಶಗಳಲ್ಲಿ ಆಧುನಿಕ ಸಾರ್ವಜನಿಕ ಶೌಚಾಲಯಗಳ ನಿರ್ಮಾಣ, ರಸ್ತೆಗಳು, ಪಾದಚಾರಿ ಮಾರ್ಗಗಳು, ಭೂಗತ ಚರಂಡಿ, ಮಳೆನೀರು ಕಾಲುವೆಗಳು ಹಾಗೂ ಬೀದಿ ದೀಪಗಳ ಅಭಿವೃದ್ಧಿ, ನಗರದ ಸೌಂದರ್ಯೀಕರಣ, ಘನ ತ್ಯಾಜ್ಯ ನಿರ್ವಹಣೆಯನ್ನು ಬಲಪಡಿಸುವುದು ಹಾಗೂ ಸ್ಮಾರ್ಟ್ ಟ್ರಾಫಿಕ್ ನಿರ್ವಹಣಾ ವ್ಯವಸ್ಥೆಯನ್ನು ಜಾರಿಗೆ ತರುವುದು ಸೇರಿದಂತೆ ಹಲವು ಪ್ರಮುಖ ಬೇಡಿಕೆಗಳನ್ನು ಸಚಿವರ ಗಮನಕ್ಕೆ ತರಲಾಯಿತು.

ಮನವಿ ಸ್ವೀಕರಿಸಿದ ನಗರಾಭಿವೃದ್ಧಿ ಸಚಿವ ಯತೀಂದ್ರ ಸಿದ್ದರಾಮಯ್ಯ ಅವರು, ಕೆಕೆಸಿಸಿಐ ಸಲ್ಲಿಸಿರುವ ಎಲ್ಲ ಬೇಡಿಕೆಗಳನ್ನು ಸರ್ಕಾರದ ಮಟ್ಟದಲ್ಲಿ ಪರಿಶೀಲಿಸಿ ಅಗತ್ಯ ಕ್ರಮ ಕೈಗೊಳ್ಳುವುದಾಗಿ ಭರವಸೆ ನೀಡಿದರು.

# ಶರಣರು ಮಾಸ, ವಾರ, ದಿನಗಳ ಬಗ್ಗೆ ತಲೆ ಕೆಡಿಸಿಕೊಂಡಿರಲಿಲ್ಲ



ಕಲಬುರಗಿ: ಏಳೆಂಬರು ಕುಲ ಹದಿನೆಂಟೆಂಬರು ಇದು ನಾವು ನಂಬೆವು. ಹಗಲೊಂದು ವಾರ ಇರುಳೊಂದು ವಾರ ಇದು ನಾವು ಬಲ್ಲೆವು ಕೂಡಲ ಸಂಗಮದೇವ-ಎಂಬಂತೆ ಬಾಳಿ ಬದುಕಿದ್ದರು. ಶರಣರು ಪ್ರಾಪಂಚಿಕ ಜೀವನದಲ್ಲಿ ಕಷ್ಟ ಪಡು. ವರ್ಷದ 12 ತಿಂಗಳಲ್ಲಿ ಒಂದು ತಿಂಗಳು, ಧರ್ಮ, ದಾಸೋಹಕ್ಕಾಗಿ ಮೀಸಲಿಡಿ ಎಂದರು. ಕಷ್ಟ (ಕೂದಲು, ಗಡ್ಡ) ಬಿಡು ಎಂದಿರಲಿಲ್ಲ. ಬಸವಣ್ಣನವರ ವಾರಸುದಾರರು ಎಂದು ಕರೆಯಿಸಿಕೊಳ್ಳುವ ಲಿಂಗಾಯತರು ಕೂಡ ಅಂಗವನ್ನು ಲಿಂಗವನ್ನಾಗಿ ಮಾಡಿಕೊಂಡು ಶರಣ-ರ ಆಶಯದಂತೆ ಬದುಕಬೇಕು ಎಂದು ಮುದಗಲ್ ಕಲ್ಯಾಣಾಶ್ರಮದ ಮಹಾಂತ ಸ್ವಾಮಿಗಳು ಹೇಳಿದರು.

ಜಯನಗರದ ಅನುಭವ ಮಂಟಪದಲ್ಲಿ ಆಯೋಜಿಸಲಾಗಿರುವ ವಚನ ಆಷಾಢ ಕಾರ್ಯಕ್ರಮದಲ್ಲಿ ಪ್ರವಚನ ನೀಡಿದ ಅವರು, ತೆಲುಗು ಕವಿ ಪಾಲ್ಕುರಿಕೆ ಸೋಮನಾಥ ಅವರು ಮೊಟ್ಟಮೊದಲು ಬಸವ ಪುರಾಣ ಬರೆದರು. ಅದನ್ನು ರಸ್ತಾಪುರದ ಭೀಮಕವಿ ಕನ್ನಡಕ್ಕೆ ಅನುವಾದಿಸಿದರು. ತರುವಾಯ ಹರಿಹರನು ಬಸವಣ್ಣ ಹಾಗೂ ಪ್ರಭುದೇವರ ರಗಳೆ ಬರೆದರು. ನಾಲ್ಕು ಪ್ರಕಾರಗಳಲ್ಲಿ ಶೂನ್ಯ ಸಂಪಾದನೆಗಳು ಸಿಗುತ್ತವೆ. 14ನೇ ಶತಮಾನದ ವಿಜಯನಗರ ಸಾಮ್ರಾಜ್ಯದ ಪ್ರೌಢ ದೇವರಾಯನ ಕಾಲದಲ್ಲಿ ನೂರೊಂದು ವಿರಕ್ತರಿದ್ದರು. ಅವರಲ್ಲಿ ಚಾಮರಸ ಕೂಡ ಒಬ್ಬರು. ಇವರು ಸಾಯುವವರ ಮತ್ತು ಅಹಂಕಾರದಿಂದ ಮರೆಯುವವರ, ಲೌಕಿಕ ಜಂಜಡಗಳಲ್ಲಿ ಮುಳುಗೇಳುವವರ ಬಗ್ಗೆ ಕಾವ್ಯ ಬರೆಯದೆ ಶಿವಯೋಗದ ಮಹಾ ಬೆಳಕು ಅಲ್ಲಮಪ್ರಭುದೇವರ ಸಲ್ಲಲಿತ ಪರಂಪರೆಯ ಬಗ್ಗೆ ಷಟ್ಪದಿ ಕಾವ್ಯ ಬರೆದರು. ಅದುವೇ ಚಾಮರಸನ ಪ್ರಭುಲಿಂಗಲೀಲೆ. ಸೂಫಿಸಂತ, ಶಿಶುನಾಳ ಶರೀಫ್ ಸಾಬರಿಗೆ ಪ್ರಭುಲಿಂಗ ಲೀಲೆ ಮುಖೋದ್ಗತವಾಗಿತ್ತು. ಆರು ಶಾಸ್ತ್ರ, ಹದಿನೆಂಟು ಪುರಾಣಗಳು ನನ್ನ ಬೆನ್ನ ಮೇಲೆ. ಪ್ರಭುಲಿಂಗ ಲೀಲೆ ನನ್ನ ತಲೆಯ ಮೇಲೆ ಎಂದು ಅವರು ಹೇಳುತ್ತಿದ್ದರು. ವಿಜಯಪುರ ಜ್ಞಾನ ಯೋಗಾಶ್ರಮದ ಪೂಜ್ಯ ಸಿದ್ಧೇಶ್ವರ ಸ್ವಾಮೀಜಿಯವರು, ಇಡೀ ವಿಶ್ವದಲ್ಲಿ ಅಲ್ಲಮರಂಥ ಅನುಭಾವಿ ಯಾರೂ ಸಿಗುವುದಿಲ್ಲ ಎಂದು ಹೇಳುತ್ತಿದ್ದರು.ಪ್ರಭುವಿನ ಪ್ರಭುಲಿಂಗ ಲೀಲೆ ಮನುಷ್ಯತ್ವದ ಶಾಲೆ. ಗುಹೇಶ್ವರನ ಅರಿವಿನ ಬೆಳಕು ಎಂದರು.

# ಹಿರೇಮಠ,ವೀಣಾ ಶರ್ಮಾಗೆ ಜಂಗಮಶೆಟ್ಟಿ ಪ್ರಶಸ್ತಿ

ಕಲಬುರಗಿ:ಕಳೆದ 13 ವರ್ಷಗಳಿಂದ ಇಲ್ಲಿನ ರಂಗ ಸಂಗಮ ಕಲಾವೇದಿಕೆಯು ಕೊಡಮಾಡುತ್ತಾ ಬಂದಿರುವ ಎಸ್.ಬಿ.ಜಂಗಮಶೆಟ್ಟಿ ರಂಗ ಪ್ರಶಸ್ತಿಗೆ ಕಲಾವಿದ ರಾಚಯ್ಯಸ್ವಾಮಿ ಹಿರೇಮಠ ಕೊಪ್ಪಳ ಹಾಗೂ

ಶ್ರೀಮತಿ ಸುಭದ್ರಾದೇವಿ ಜಂಗಮಶೆಟ್ಟಿ ರಂಗ ಪ್ರಶಸ್ತಿಗೆ ಕಲಾವಿದೆ ಹಾಗೂ ನಿರ್ದೇಶಕಿ ವೀಣಾ ಶರ್ಮಾ ಹುಬ್ಬಳ್ಳಿ ಅವರು ಆಯ್ಕೆಯಾಗಿದ್ದಾರೆ.

ಪ್ರಶಸ್ತಿ ಆಯ್ಕೆಗಾಗಿ ಕರ್ನಾಟಕ ನಾಟಕ ಅಕಾಡೆಮಿಯ ಮಾಜಿ ಅಧ್ಯಕ್ಷ ಎಲ್.ಬಿ.ಶೇಖ್ ಮಾಸ್ತರ್ ಅಧ್ಯಕ್ಷತೆಯಲ್ಲಿ ಜರುಗಿದ ಸಭೆಯಲ್ಲಿ ಸದಸ್ಯರಾದ ಹಿರಿಯ ರಂಗಕರ್ಮಿ ಎಚ್. ಎಸ್.ಬಸವಪ್ರಭು, ರಂಗಕರ್ಮಿ ಶಾಂತಾ ಕುಲಕರ್ಣಿ, ಸಾಹಿತಿ ಬಿ.ಎಚ್.ನಿರಗುಡಿ, ರಂಗಕರ್ಮಿ ನಾರಾಯಣ ಕುಲಕರ್ಣಿ, ರಂಗ ನಿರ್ದೇಶಕ ವಿಶ್ವರಾಜ ಪಾಟೀಲ್, ರಂಗಾಯಣ ನಿರ್ದೇಶಕಿ ಡಾ. ಸುಜಾತಾ ಜಂಗಮಶೆಟ್ಟಿ, ರಂಗ ಸಂಗಮ ಕಲಾವೇದಿಕೆಯ ಸದಸ್ಯ ರಾಜೇಶ್ವರಿ ಗಲಗಲಿ ಹಾಗೂ ರಂಗ ಸಂಗಮ ಕಲಾವೇದಿಕೆಯ ಅಧ್ಯಕ್ಷೆ ಶಿವಗೀತಾ ಬಸವಪ್ರಭು ಇದ್ದರು.

ಜುಲೈ 19 ರಂದು ನಗರದ "ವಿಶ್ವೇಶ್ವರಯ್ಯ ಭವನದಲ್ಲಿ" ಆಯೋಜಿಸಲಾಗುವ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ತಲಾ 10 ಸಾವಿರ ರೂ. ಪ್ರಶಸ್ತಿ ಪತ್ರ, ಶಾಲು, ಸ್ಮರಣಿಕೆ ನೀಡಿ ಗೌರವಿಸಲಾಗುವುದು ಎಂದು ರಂಗ ಸಂಗಮ ಕಲಾ ವೇದಿಕೆ ಕಾರ್ಯದರ್ಶಿ ಅನಿಕೇತ ಮಡಕಿ ತಿಳಿಸಿದ್ದಾರೆ.

# ಇಂಚಗೇರಿ ಮಠದಲ್ಲಿ ಹುತಾತ್ಮರ 29ನೇ ಪುಣ್ಯ ಸ್ಮರಣೋತ್ಸವ



ಕಲಬುರಗಿ:ಶ್ರೀ ಕ್ಷೇತ್ರ ಇಂಚಗೇರಿ ಮಠದಲ್ಲಿ ಪ್ರತಿ ವರ್ಷದಂತೆ ಈ ವರ್ಷವು ಕೂಡ ಜು.16 ರಿಂದ 17 ರವರೆಗೆ ಎರಡು ದಿನಗಳ ಕಾಲ ಹುತಾತ್ಮರ 29ನೇ ಪುಣ್ಯಸ್ಮರಣೆ ಸಪ್ತಾಹ ಕಾರ್ಯಕ್ರಮ ನಡೆಯಲಿದೆ.ಜು.16 ರಂದು ರಾತ್ರಿ 9 ಗಂಟೆಗೆ ಶ್ರೀಮಠದ ಶ್ರೀ ಸಮರ್ಥ ಸದ್ಗುರು ರೇವಣಸಿದ್ಧೇಶ್ವರ ಮಹಾರಾಜರು ಹುತಾತ್ಮರ ಗದ್ದುಗೆಯ ಹಾಗೂ ದಾಸಬೋಧ ಪೂಜೆ ಯೊಂದಿಗೆ ಪುಣ್ಯಸ್ಮರಣೆ ಸಪ್ತಾಹಕ್ಕೆ ಚಾಲನೆ ನೀಡುವರು. ಅಂದು ಸಂಜೆ ಅಭಿಷೇಕ ವಿಶೇಷ ಪೂಜೆ ಪುರಾಣ-ಪ್ರವಚನ, ರಾತ್ರಿ ಜಾಗರಣೆ ನಿಮಿತ್ಯ ಶ್ರೀ ಮಾಧವಾನಂದ ಪ್ರಭೂಜಿ ಭಜನಾ ಮಂಡಳಿಯಿಂದ ಭಜನಾ ಕಾರ್ಯಕ್ರಮ ನಡೆಯಲಿದೆ. ಜು.17 ರಂದು ಬೆಳಿಗ್ಗೆ 11 ಗಂಟೆಗೆ ಶ್ರೀ ಸಮರ್ಥ ರಾಮದಾಸ ಮಹಾರಾಜರ ದಾಸಬೋದ ಪಠಣ ಭಜನಾಪದ, ಪುರಾಣ-ಪ್ರವಚನ,ಶ್ರೀಸದ್ಗುರು ಸಮರ್ಥ ರೇವಣಸಿದ್ದೇಶ್ವರ ಮಹಾ ರಾಜರ ಆಶೀರ್ವಚನ ಹಾಗೂ ಪುಷ್ಪವೃಷ್ಠಿಯೊಂದಿಗೆ ಹುತಾತ್ಮರ ಪುಣ್ಯ ಸ್ಮರಣೋತ್ಸವ ಮಂಗಲಗೊಳ್ಳಲಿದೆ ಎಂದು ಶ್ರೀಮಠದ ಪ್ರಕಟಣೆ ತಿಳಿಸಿದೆ.

# ಜೆಸ್ಕಾಂ ಶಾಶ್ವತ ವಿದ್ಯುತ್ ಸಂಪರ್ಕಕ್ಕೆ ಒಸಿ ಸಲ್ಲಿಕೆ: ಆ. 15ರ ವರೆಗೆ ವಿನಾಯಿತಿ

ಕಲಬುರಗಿ : ರಾಜ್ಯ ಸರ್ಕಾರವು 2026ರ ಮೇ 31ರಂದು ಅಥವಾ ಅದಕ್ಕೂ ಮುಂಚಿತವಾಗಿ ನಿರ್ಮಾಣ ಪೂರ್ಣಗೊಂಡಿರುವ ವಸತಿ ಕಟ್ಟಡಗಳಿಗೆ ಶಾಶ್ವತ ವಿದ್ಯುತ್ ಸಂಪರ್ಕ ಕಲ್ಪಿಸುವ ಉದ್ದೇಶದಿಂದ, ಸ್ವಾಧೀನಾನುಭವ ಪ್ರಮಾಣಪತ್ರ ಸಲ್ಲಿಕೆಯಿಂದ ಆಗಸ್ಟ್ 15 ರವರೆಗೆ ವಿನಾಯಿತಿ ನೀಡಿ ಆದೇಶ ಹೊರಡಿಸಿದೆ. ಈ ಅವಕಾಶದ ಸದುಪಯೋಗವನ್ನು ಗ್ರಾಹಕರು ಪಡೆದುಕೊಳ್ಳುವಂತೆ ಜೆಸ್ಕಾಂ ಪ್ರಕಟಣೆಯಲ್ಲಿ ತಿಳಿಸಿದೆ. ಜೆಸ್ಕಾಂ ವ್ಯಾಪ್ತಿಯ ಕಲಬುರಗಿ, ಬಳ್ಳಾರಿ, ರಾಯಚೂರು, ಯಾದಗಿರಿ, ಬೀದರ, ಕೊಪ್ಪಳ ಹಾಗೂ ವಿಜಯನಗರ ಜಿಲ್ಲೆಗಳ ಮಹಾನಗರ ಪಾಲಿಕೆ, ನಗರ ಸ್ಥಳೀಯ ಸಂಸ್ಥೆಗಳು ಹಾಗೂ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ 2,400 ಚದರ ಅಡಿಗಳವರೆಗೆ (ಶೇ. 20ರ ಹೆಚ್ಚುವರಿ ವ್ಯತ್ಯಾಸದ ಮಿತಿಯೊಂದಿಗೆ) ಅಳತೆಯ ನಿವೇಶನಗಳಲ್ಲಿ ನಿರ್ಮಿಸಲಾಗಿರುವ ಜಿ+3 ಅಂತಸ್ತಿನ ವಸತಿ ಕಟ್ಟಡಗಳು ಅಥವಾ ಸ್ಟಿಲ್ಟ್ ಪಾಕಿರ್‌ಂಗ್ + 4 ಮಹಡಿಗಳನ್ನು ಹೊಂದಿರುವ ವಸತಿ ಕಟ್ಟಡಗಳಿಗೆ, 2026ರ ಮೇ 31ರೊಳಗೆ ನಿರ್ಮಾಣ ಪೂರ್ಣಗೊಂಡಿದ್ದಲ್ಲಿ ಸ್ವಾಧೀನಾನುಭವ ಪ್ರಮಾಣಪತ್ರ (ಒಸಿ) ಸಲ್ಲಿಕೆಯಿಂದ ಒಂದು ಬಾರಿಯ ವಿನಾಯಿತಿ ನೀಡಲಾಗಿದೆ. ಈ ಆದೇಶವು 2026ರ ಮೇ 31ರೊಳಗೆ ನಿರ್ಮಾಣ ಪೂರ್ಣಗೊಂಡಿರುವ ಕೆಳಕಂಡ ಪ್ರಕರಣಗಳಿಗೆ ಮಾತ್ರ ಅನ್ವಯಿಸುತ್ತದೆ

ಶಾಶ್ವತ ವಿದ್ಯುತ್ ಸಂಪರ್ಕಕ್ಕಾಗಿ ಈಗಾಗಲೇ ಅರ್ಜಿ ಸಲ್ಲಿಸಿರುವ ವಸತಿ ಕಟ್ಟಡಗಳು.

ತಾತ್ಕಾಲಿಕ ವಿದ್ಯುತ್ ಸಂಪರ್ಕ ಹೊಂದಿದ್ದು, ಇನ್ನೂ ಶಾಶ್ವತ ಸಂಪರ್ಕಕ್ಕಾಗಿ ಅರ್ಜಿ ಸಲ್ಲಿಸದಿರುವ ವಸತಿ ಕಟ್ಟಡಗಳು.3. ಯಾವುದೇ ರೀತಿಯ (ತಾತ್ಕಾಲಿಕ ಅಥವಾ ಶಾಶ್ವತ) ವಿದ್ಯುತ್ ಸಂಪರ್ಕಕ್ಕಾಗಿ ಇನ್ನೂ ಅರ್ಜಿ ಸಲ್ಲಿಸದಿರುವ ವಸತಿ ಕಟ್ಟಡಗಳು. ಇದಲ್ಲದೆ, ಗ್ರಾಮೀಣ ಪ್ರದೇಶಗಳಲ್ಲಿರುವ ರೈತರು ವಾಸಿಸುವ ಮನೆಗಳು, ತೋಟದ ಮನೆಗಳು, ಕೃಷಿ ಉಪಕರಣಗಳನ್ನು ಸಂಗ್ರಹಿಸುವ ಕೊಠಡಿಗಳು, ದನದ ಕೊಟ್ಟಿಗೆಗಳು, ರೇಷ್ಮೆ ಗೂಡಿನ ಮನೆಗಳು, ಕೋಳಿ ಸಾಕಾಣಿಕೆ ಕೇಂದ್ರಗಳು ಹಾಗೂ ಕೃಷಿ ಸಂಬಂಧಿತ ಚಟುವಟಿಕೆಗಳಿಗೂ ಸಹ ವಿದ್ಯುತ್ ಸಂಪರ್ಕ ಪಡೆಯಲು ಸ್ವಾಧೀನಾನುಭವ ಪ್ರಮಾಣಪತ್ರ (ಒಸಿ) ಸಲ್ಲಿಸುವುದರಿಂದಲೂ ವಿನಾಯಿತಿ ನೀಡಲಾಗಿದೆ.

ಹೆಚ್ಚಿನ ಮಾಹಿತಿ ಹಾಗೂ ಸ್ಪಷ್ಟೀಕರಣಕ್ಕಾಗಿ ಗ್ರಾಹಕರು ತಮ್ಮ ವ್ಯಾಪ್ತಿಯ ಜೆಸ್ಕಾಂ ಉಪವಿಭಾಗ ಕಚೇರಿಯನ್ನು ಸಂಪರ್ಕಿಸುವಂತೆ ಪ್ರಕಟಣೆಯಲ್ಲಿ ತಿಳಿಸಲಾಗಿದೆ.



# ಎಸ್‌ಐಆರ್ ಪರಿಶೀಲನೆ, ಮಾರ್ಗದರ್ಶನ ಸಭೆ

ಕಲಬುರಗಿ: ದಕ್ಷಿಣಮತ ಕ್ಷೇತ್ರದ ವಾರ್ಡ್ ನಂ. 43 ಶಕ್ತಿನಗರದಲ್ಲಿ ಕೆಪಿಸಿಸಿ ಪದವಿ ವಿಭಾಗದಿಂದ ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ, ಕಲಬುರಗಿ ದಕ್ಷಿಣ ಶಾಸಕ ಅಲ್ಲಮಪ್ರಭು ಪಾಟೀಲ್ ಮತ್ತು ಸಂಸದ ರಾಧಾಕೃಷ್ಣ ದೊಡ್ಡಮನಿ ಅವರ ಮಾರ್ಗದರ್ಶನದಲ್ಲಿ ಎಸ್‌ಐಆರ್‌ಗೆ ಸಂಬಂಧಿಸಿದಂತೆ ಆನ್‌ಲೈನ್‌ನಲ್ಲಿ ಪರಿಶೀಲಿಸುವುದು ಮತ್ತು ಮತದಾರರನ್ನು ಬಿಎಒಗಳೊಂದಿಗೆ ಪತ್ತೆ ಮಾಡುವುದು ಹೇಗೆ ಎಂದು ಪರಿಶೀಲನೆ ಮತ್ತು ಮಾರ್ಗದರ್ಶನದೊಂದಿಗೆ ಸಭೆ ನಡೆಸಲಾಯಿತು.

ಕೆಪಿಸಿಸಿ ಪದವಿ ವಿಭಾಗದ ರಾಜ್ಯ ಪ್ರಧಾನ ಕಾರ್ಯದರ್ಶಿ ಡಾ.ಕೃಷ್ಣಮೂರ್ತಿ, ಪದವೀಧರ ವಿಭಾಗದ ಜಿಲ್ಲಾಧ್ಯಕ್ಷ ನರಸಪ್ಪ ದೊಡ್ಡಮನಿ, ಉಪಾಧ್ಯಕ್ಷ ಶರಣು ಪರಗಡೆ, ಜಿಲ್ಲಾ ಕಾರ್ಯದರ್ಶಿ ಸಂಜೀವ್ ಮೇಲ್ಮನಿ, ಮಹೇಶ ತೆಗಿಳ್ಳಿ ಇದ್ದರು.



**ಕಲಬುರಗಿ: ಹಾಸ್ಟೆಲ್ ನೌಕರರ ಸೇವಾಭದ್ರತೆ ಸೇರಿದಂತೆ ವಿವಿಧ ಬೇಡಿಕೆಗಳಿಗೆ ಆಗ್ರಹಿಸಿ ಕರ್ನಾಟಕ ರಾಜ್ಯ ಸರಕಾರಿ ಹಾಸ್ಟೆಲ್ ಮತ್ತು ವಸತಿ ಶಾಲಾ ಹೊರಗುತ್ತಿಗೆ ನೌಕರರ ಸಂಘ ಜಿಲ್ಲಾ ಸಮಿತಿಯಿಂದ ಜಿಲ್ಲಾಧಿಕಾರಿ ಕಚೇರಿ ಎದುರು ಅನಿರ್ದಿಷ್ಟ ಧರಣಿ ಆರಂಭಿಸಲಾಯಿತು. ರಾಜ್ಯಾಧ್ಯಕ್ಷ ಭೀಮಶೆಟ್ಟಿ ಯಂಪಳ್ಳಿ,ಪರಶುರಾಮ ಹಡಲಗಿ,ಮೇಘರಾಜ ಕಠಾರೆ ಸೇರಿದಂತೆ ಹಲವರು ಪಾಲ್ಗೊಂಡರು.**



# ಹಳೆಯ ವಿದ್ಯಾರ್ಥಿಗಳ ವಿಶೇಷ ಉಪನ್ಯಾಸ ಯಶಸ್ವಿ ಆಯೋಜನೆ

ಕಲಬುರಗಿ: ನಗರದ ಎಚ್.ಕೆ.ಇ.ಎಸ್. ಮಾತೋಶ್ರೀ ತಾರಾದೇವಿ ರಾಂಪುರೆ ಔಷಧ ವಿಜ್ಞಾನ ಮಹಾವಿದ್ಯಾಲಯ, ವತಿಯಿಂದ ಹೆಮ್ಮೆಯ ಹಳೆಯ ವಿದ್ಯಾರ್ಥಿ ಡಾ. ಮಲ್ಲಿನಾಥ ಹಡಿಮನಿ (ಅಮೆರಿಕಾ) ಅವರಿಂದ ಅಮೆರಿಕಾದಲ್ಲಿ ಫಾರ್ಮಸಿ ಪ್ರಾಕ್ಟೀಸ್ ವಿಷಯದ ಕುರಿತು ವಿಶೇಷ ಹಳೆಯ ವಿದ್ಯಾರ್ಥಿಗಳ ಉಪನ್ಯಾಸವನ್ನು ಯಶಸ್ವಿಯಾಗಿ ಆಯೋಜಿಸಲಾಯಿತು. ಈ ಕಾರ್ಯಕ್ರಮದಲ್ಲಿ ಡಾ. ಮಲ್ಲಿನಾಥ ಹಡಿಮನಿ ಅವರು ಅಮೆರಿಕಾದಲ್ಲಿನ ಫಾರ್ಮಸಿ ವೃತ್ತಿ, ಉದ್ಯೋಗಾವಕಾಶಗಳು, ಕ್ಲಿನಿಕಲ್ ಸಂಶೋಧನೆ ಹಾಗೂ ಉನ್ನತ ಶಿಕ್ಷಣದ ಕುರಿತು ತಮ್ಮ ಅಮೂಲ್ಯ ಅನುಭವ ಮತ್ತು ಮಾರ್ಗದರ್ಶನವನ್ನು ವಿದ್ಯಾರ್ಥಿಗಳೊಂದಿಗೆ ಹಂಚಿಕೊಂಡರು.
ಉಪನ್ಯಾಸವು ಅತ್ಯಂತ ಮಾಹಿತಿಪೂರ್ಣ, ಸಂವಾದಾತ್ಮಕ ಹಾಗೂ ಪ್ರೇರಣಾದಾಯಕವಾಗಿದ್ದು, ವಿದ್ಯಾರ್ಥಿಗಳು ಉತ್ಸಾಹದಿಂದ ಭಾಗವಹಿಸಿ ಅವರ ವೃತ್ತಿಪರ ಅನುಭವದಿಂದ ಹೆಚ್ಚಿನ ಪ್ರಯೋಜನ ಪಡೆದರು.



## ಬಬಲೇಶ್ವರ ಮತಕ್ಷೇತ್ರದ ಮತಗಟ್ಟೆ ಅಧಿಕಾರಿಗಳಿಗೆ ಸನ್ಮಾನ

# ಎಸ್‌ಆರ್: ಅವಧಿಗೆ ಮುನ್ನವೇ ಶೇ.100ರಷ್ಟು ಸಾಧನೆ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಬಬಲೇಶ್ವರ ವಿಧಾನಸಭಾ ಮತಕ್ಷೇತ್ರದಲ್ಲಿ ನಡೆಯುತ್ತಿರುವ 2026ರ ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ ಕಾರ್ಯದಲ್ಲಿ ನಿಗದಿತ ಅವಧಿಗಿಂತ ಮುಂಚಿತವಾಗಿಯೇ ಶೇಕಡಾ ನೂರರಷ್ಟು ಪ್ರಗತಿ ಸಾಧಿಸಿದ ಮತಗಟ್ಟೆ ಮಟ್ಟದ ಅಧಿಕಾರಿಗಳು ಹಾಗೂ ಮೇಲ್ವಿಚಾರಕರನ್ನು ನಗರದ ಉಪ ವಿಭಾಗಾಧಿಕಾರಿಗಳ ಕಚೇರಿಯಲ್ಲಿ ಜುಲೈ 16ರಂದು ಸನ್ಮಾನಿಸಿ, ಅಭಿನಂದಿಸಲಾಯಿತು.

ಮತದಾರರ ಪಟ್ಟಿ ಪರಿಷ್ಕರಣೆಯ ಗಣತಿ ನಮೂನೆಗಳ ವಿತರಣೆ ಹಾಗೂ ಡಿಜಿಟೈಜೇಶನ್ ಕಾರ್ಯವನ್ನು ನಿಗದಿತ ಸಮಯಕ್ಕಿಂತ ಮೊದಲೇ ಯಶಸ್ವಿಯಾಗಿ ಪೂರ್ಣಗೊಳಿಸಿದ ಹಿನ್ನೆಲೆಯಲ್ಲಿ ಸನ್ಮಾನಿಸಲಾಯಿತು. 29– ಬಬಲೇಶ್ವರ ಮತಕ್ಷೇತ್ರದ ಭಾಗ ಸಂಖ್ಯೆ 84ರ ಮತಗಟ್ಟೆ ಮಟ್ಟದ ಅಧಿಕಾರಿಯಾದ ಎಚ್.ಎನ್. ಮೋಹಿತೆ ಹಾಗೂ ಮತಗಟ್ಟೆ ಮೇಲ್ವಿಚಾರಕರಾದ ಶ್ರೀಮತಿ ಸುಜಾತಾ ಬಾಗಲಕೋಟ, ಭಾಗ ಸಂಖ್ಯೆ 204ರ ಮತಗಟ್ಟೆ ಅಧಿಕಾರಿಯಾದ ಶ್ರೀಮತಿ ಚಂದ್ರವ್ವ ತಂಬದ ಹಾಗೂ ಮತಗಟ್ಟೆ ಮೇಲ್ವಿಚಾರಕರಾದ ಶಕೆ.ಕೆ. ಅಸ್ಕಿ ಮತ್ತು ಭಾಗ ಸಂಖ್ಯೆ 212ರ ಮತಗಟ್ಟೆ ಅಧಿಕಾರಿಯಾದ ಶ್ರೀಮತಿ ಸುನೀತಾ ವಾಲೀಕಾರ ಹಾಗೂ ಮತಗಟ್ಟೆ ಮೇಲ್ವಿಚಾರಕರಾದ ಶಿವಪ್ಪ ಕಾಂಬಳೆ ಇವರನ್ನು ಸನ್ಮಾನಿಸಲಾಯಿತು.ಅವಧಿಗೆ ಮುನ್ನವೇ ಅತ್ಯುತ್ತಮ ಪ್ರಗತಿ ಸಾಧಿಸಿದ ಈ ಎಲ್ಲಾ ಸಿಬ್ಬಂದಿಗಳ ಕಾರ್ಯ ವೈಖರಿಯನ್ನು ಮುಕ್ತಕಂಠದಿಂದ ಶ್ಲಾಘಿಸಿದ ವಿಜಯಪುರ ಉಪ ವಿಭಾಗಾಧಿಕಾರಿಗಳಾದ ಗುರುನಾಥ ದಡ್ಡೆ, ಬಬಲೇಶ್ವರ ತಹಶೀಲ್ದಾರ್ ಶಾಂತಲಾ ಚಂದನ್ ಹಾಗೂ ತಿಕೋಟಾ ತಹಶೀಲ್ದಾರ್ ಸುರೇಶ ಚವಲರ್ ಅವರು ಸನ್ಮಾನ ನೆರವೇರಿಸಿದರು. ಈ ಸಂದರ್ಭದಲ್ಲಿ ಕಚೇರಿಯ ಅಧಿಕಾರಿ,ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.

# ಸಾವಿನ ಮನೆಗೆ ಸಾಂತ್ವನ ಕಾರ್ಯಕ್ರಮ ಮೂಲಕ ನೊಂದವರಿಗೆ ನೆರವು

■ ಉದಯರಶ್ಮಿ ದಿನಪತ್ರಿಕೆ



ಅಂತರಸಂತೆ ಯುವಪಡೆಯ ಸಮಾಜಸೇವೆಗೆ ಡಿ.ಸುಂದರ್ ದಾಸ್ ಮೆಚ್ಚುಗೆ

ಎಚ್ ಡಿ ಕೋಟೆ: ಅಂತರಸಂತೆ ಯುವಪಡೆಯು 4 ವರ್ಷಗಳಲ್ಲಿ ಅನೇಕ ಸಾಮಾಜಿಕ ಕೆಲಸಗಳನ್ನು ಮಾಡುತ್ತಿದೆ. ಅದರಲ್ಲಿಯೂ ಸಾವಿನ ಮನೆಗೆ ಸಾಂತ್ವನ ಎಂಬ ಕಾರ್ಯಕ್ರಮ ಆಯೋಜಿಸಿ ಗ್ರಾಮದಲ್ಲಿ ಯಾರ ಮನೆಯಲ್ಲಾದರೂ ಸಾವಾದರೆ ಆ ಮನೆಗೆ ಹೋಗಿ ಅಲ್ಲಿ ಒಂದಿಷ್ಟು ಸೇವಾ ಕಾರ್ಯದ ಜತೆಗೆ ಊಟದ ವ್ಯವಸ್ಥೆ ಮಾಡುವ ಕೆಲಸ ಮಾಡುತ್ತಿದ್ದಾರೆ. ಇದು ನಿಜಕ್ಕೂ ಶ್ಲಾಘನೀಯ. ನಾನು ಇಂತಹ ಕಾರ್ಯಕ್ರಮವನ್ನು ಬೇರೆಲ್ಲೂ ನೋಡಿಲ್ಲ. ಇದು ಉತ್ತಮ ಕೆಲಸ ಎಂದು ಕರ್ನಾಟಕ ರಾಜ್ಯ ಬೀಜ ಹಾಗೂ ಸಾವಯವ ಪ್ರಮಾಣನ ಸಂಸ್ಥೆಯ ಮಾಜಿ ಅಧ್ಯಕ್ಷ ಹಾಗೂ ಕೆಪಿಸಿಸಿ ಸದಸ್ಯ ಡಿ.ಸುಂದರ್ ದಾಸ್ ಹೇಳಿದರು. ತಾಲೂಕಿನ ಅಂತರಸಂತೆ ಗ್ರಾಮದಲ್ಲಿ ನಡೆದ ಅಂತರಸಂತೆ ಯುವಪಡೆಯ 5ನೇ ವರ್ಷದ ವಾರ್ಷಿಕೋತ್ಸವ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, ಈ ಯುವ ಸಂಘಟನೆ ಒಂದು ವಿಶೇಷ ಪಡೆಯಾಗಿದೆ. ಇಂತಹ ಸಂಘಟನೆ ಮತ್ತಷ್ಟು ವರ್ಷ ಮುಂದುವರಿಯಲಿ, ಜತೆಗೆ ಊರಿನ ಅಭಿವೃದ್ಧಿ ಕಾರ್ಯಗಳಲ್ಲಿ ಸಕ್ರಿಯವಾಗಿರಲಿ ಎಂದು ಆಶಿಸಿದರು.

ನಿವೃತ್ತ ಮುಖ್ಯ ಶಿಕ್ಷಕ ಹೆತ್ತೇಗೌಡ ಮಾತನಾಡಿ, ಗ್ರಾಮದಲ್ಲಿ ಯುವಪಡೆ ಸಂಘಟನೆ ಸಕ್ರಿಯವಾಗಿರುವುದು ನಿಜಕ್ಕೂ ಹೆಮ್ಮೆಯ ವಿಚಾರ ಎಂದರು.

ಇದೇ ವೇಳೆ ಡಿ.ಸುಂದರ್ ದಾಸ್, ಹೆತ್ತೇಗೌಡ ಹಾಗೂ ಶ್ರೀ ಮಹದೇಶ್ವರಸ್ವಾಮಿ ದೇವಸ್ಥಾನ ಸಮಿತಿ ಅಧ್ಯಕ್ಷರಾದ ವಿ.ರಾಜಪ್ಪ ಅವರನ್ನು ಯುವಪಡೆಯ ವತಿಯಿಂದ ಸನ್ಮಾನಿಸಲಾಯಿತು.

ಬಳಿಕ 1ನೇ ತರಗತಿಯಿಂದ ದ್ವಿತೀಯ ಪಿಯುಸಿವರೆಗೆ ಅತಿ ಹೆಚ್ಚು ಅಂಕ ಗಳಿಸಿದ ವಿದ್ಯಾರ್ಥಿಗಳಿಗೆ ಧಾರವಾಡ ಕರ್ನಾಟಕ ವಿಶ್ವವಿದ್ಯಾನಿಲಯದ ಸಮೂಹ ಸಂವಹನ ಮತ್ತು ಪತ್ರಿಕೋದ್ಯಮ ವಿಭಾಗದ ನಿವೃತ್ತ ಮುಖ್ಯಸ್ಥರಾದ ಡಾ.ಎ.ಎಸ್.ಬಾಲಸುಬ್ರಹ್ಮಣ್ಯ ಅವರು ತಮ್ಮ ತಂದೆ–ತಾಯಿ ದಿ.ಎ.ಎಸ್.ಸುಬ್ಬಣ್ಣ–ದಿ.ನಾಗಮ್ಮ ಹೆಸರಿನಲ್ಲಿ ಪ್ರತಿಭಾ ಪುರಸ್ಕಾರ ನೀಡಿದರು. ಸಿಎ ವ್ಯಾಸಂಗ ಪೂರ್ಣಗೊಳಿಸಿದ ದರ್ಶನ್ ಹಾಗೂ ಬಾಲ್ ಬ್ಯಾಡ್ಮಿಂಟನ್ ಕ್ರೀಡೆಯಲ್ಲಿ ರಾಷ್ಟ್ರೀಯ ಮಟ್ಟಕ್ಕೆ ಆಯ್ಕೆಯಾದ ವಿನಯ್ ಅವರನ್ನು ಅಭಿನಂದಿಸಲಾಯಿತು.

ಈ ಸಂದರ್ಭ ಯುವ ಮುಖಂಡ ನವೀನ್ ದಾಸ್, ಮೈಸೂರು ಜಿಲ್ಲಾ ಅಮರ ಶಿಲ್ಪಿ ವೇದಿಕೆ ಜಿಲ್ಲಾಧ್ಯಕ್ಷ ಮಹೇಶ್, ಮಹದೇಶ್ವರ ದೇವಸ್ಥಾನ ಸಮಿತಿ ಸಂಚಾಲಕ ಎ.ಪಿ.ಕೃಷ್ಣ, ರಾಜಣ್ಣ, ಹಾಲು ಉತ್ಪಾದಕರ ಸಹಕಾರ ಸಂಘದ ಅಧ್ಯಕ್ಷ ವಿ.ನಾಗರಾಜು, ಬಿಜೆಪಿ ಮುಖಂಡ ಸುಬ್ರಹ್ಮಣ್ಯ, ಪುಟ್ಟಸ್ವಾಮಪ್ಪ, ಎಸ್ ಡಿಎಂಸಿ ಅಧ್ಯಕ್ಷ ಸುಬ್ರಹ್ಮಣ್ಯ, ಅಖಾವೀಲಿಂ ಮಹಾಸಭಾ ಯುವಘಟಕದ ಮಾಜಿ ಅಧ್ಯಕ್ಷ ಅಭಿ ಅಂತರಸಂತೆ, ಮೋಹನ್ ಕುಮಾರ್, ದೇವಣ್ಣ, ಅರ್ಚಕ ಲೋಕೇಶ್, ಬಸವರಾಜು, ಸುರೇಂದ್ರ, ಸತೀಶ್, ಕುಮಾರ್, ಎಂ.ಜಯಣ್ಣ, ನಂದೀಶ್, ಆನಂದ, ಸುಬ್ರಹ್ಮಣ್ಯ ಸೇರಿದಂತೆ ಯುವಪಡೆಯ ಸದಸ್ಯರು, ಗ್ರಾಮಸ್ಥರು ಹಾಜರಿದ್ದರು.

## ಮೂವರಿಗೆ ವಾರ್ಷಿಕ, ಮೂವರಿಗೆ ಯುವ ಪ್ರಶಸ್ತಿ। ಜಿಲ್ಲಾಧಿಕಾರಿ ಡಾ.ಆನಂದ ಕೆ. ಪ್ರಕಟಣೆ

# ಹಲಸಂಗಿ ಗೆಳೆಯರ ಪ್ರತಿಷ್ಠಾನದ ಪ್ರಶಸ್ತಿ ಪ್ರಕಟ

■ ಉದಯರಶ್ಮಿ ದಿನಪತ್ರಿಕೆ



ವಿಜಯಪುರ: ಹಲಸಂಗಿ ಗೆಳೆಯರ ಪ್ರತಿಷ್ಠಾನದ ವಾರ್ಷಿಕ ಗೌರವ ಹಾಗೂ ಯುವ ಪ್ರಶಸ್ತಿಗಳನ್ನು ಪ್ರತಿಷ್ಠಾನದ ಅಧ್ಯಕ್ಷರೂ ಆಗಿರುವ ಜಿಲ್ಲಾಧಿಕಾರಿಗಳಾದ ಡಾ.ಆನಂದ ಕೆ. ಅವರು ಪ್ರಕಟಿಸಿದ್ದಾರೆ.

ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ನಡೆದ ಪ್ರತಿಷ್ಠಾನದ ಸಭೆಯಲ್ಲಿ ಅರ್ಹರಿಗೆ ಪ್ರಶಸ್ತಿಗಳನ್ನು ಅಂತಿಮಗೊಳಿಸಲಾಗಿದೆ.

ಪ್ರತಿಷ್ಠಾನದ ಗೌರವ ವಾರ್ಷಿಕ ಪ್ರಶಸ್ತಿಯನ್ನು ಜಾನಪದ ಸಾಹಿತ್ಯ ಸಮಗ್ರ ಸಾಹಿತ್ಯ ಹಾಗೂ ವಿಮರ್ಶೆ, ಸೃಜನಶೀಲ ಸಾಹಿತ್ಯ ಕ್ಷೇತ್ರದಲ್ಲಿ ಕೃತಿಗಳನ್ನು ಗಣನೀಯ ಸೇವೆ ಸಲ್ಲಿಸಿರುವ ಸಾಹಿತಿಗಳನ್ನು ಹಾಗೂ ಯುವ ಪ್ರಶಸ್ತಿಗೆ ಅತ್ಯುತ್ತಮ ಕೃತಿಗಳನ್ನು ರಚಿಸಿದ ಯುವ ಬರಹಗಾರರನ್ನು ಆಯ್ಕೆ ಸಮಿತಿ ಆಯ್ಕೆ ಮಾಡಿದೆ.


ವಾರ್ಷಿಕ ಗೌರವ ಪ್ರಶಸ್ತಿ 50 ಸಾವಿರ ರೂ.ಗಳು ಹಾಗೂ ಯುವ ಪ್ರಶಸ್ತಿಗೆ 10 ಸಾವಿರ ರೂ.ಗಳ ನಗದಿನೊಂದಿಗೆ ಪ್ರಶಸ್ತಿ ಪುರಸ್ಕೃತರನ್ನು ಗೌರವಿಸಲಾಗುವುದು ಎಂದು ಜಿಲ್ಲಾಧಿಕಾರಿಗಳು ತಿಳಿಸಿದ್ದಾರೆ.

ವಾರ್ಷಿಕ ಪ್ರಶಸ್ತಿ ಪುರಸ್ಕೃತರು: ಜನಪದ ಕ್ಷೇತ್ರದಲ್ಲಿ 2022ನೇ ವಾರ್ಷಿಕ ಗೌರವ ಪ್ರಶಸ್ತಿಗೆ ದಕ್ಷಿಣಕನ್ನಡ ಜಿಲ್ಲೆಯ ಡಾ. ಬಿ.ಎ. ವಿವೇಕ ರೈ ಪುರಸ್ಕೃತರಾಗಿದ್ದಾರೆ. ಸಮಗ್ರ ಸಾಹಿತ್ಯ ಕ್ಷೇತ್ರದಲ್ಲಿ 2023ನೇ ವಾರ್ಷಿಕ ಗೌರವ ಪ್ರಶಸ್ತಿಗೆ ಕಲಬುರಗಿ ಜಿಲ್ಲೆಯ ಪ್ರೊ. ಎಚ್.ಟಿ. ಪೋತೆ ಹಾಗೂ ಸಂಶೋಧನೆ ಮತ್ತು ವಿಮರ್ಶಾ ಕ್ಷೇತ್ರದಲ್ಲಿ 2024ರ ವಾರ್ಷಿಕ ಗೌರವ ಪ್ರಶಸ್ತಿಗೆ ಬೆಂಗಳೂರು ಜಿಲ್ಲೆಯ ಶ್ರೀಮತಿ ನೇಮಿಚಂದ್ರ ಅವರು ಪುರಸ್ಕೃತರಾಗಿದ್ದಾರೆ. ಎಂದು ತಿಳಿಸಿದ್ದಾರೆ.ಯುವ ಪ್ರಶಸ್ತಿ ಪುರಸ್ಕೃತರು: ಪ್ರತಿಷ್ಠಾನದ ಯುವ ಪ್ರಶಸ್ತಿಗೆ ಮೂವರು ಆಯ್ಕೆಯಾಗಿದ್ದಾರೆ. 2022ನೇ ಸಾಲಿನ ಯುವ ಪ್ರಶಸ್ತಿಗೆ ವಿಜಯಪುರ ಜಿಲ್ಲೆಯ ಡಾ. ವಿನಯ ನಂದಿಹಾಳ, 2023ನೇ ಸಾಲಿನ ಪ್ರಶಸ್ತಿಗೆ ತುಮಕೂರು ಜಿಲ್ಲೆಯ ಡಾ. ಗೋವಿಂದರಾಜು ಕೆ.ಎಂ. ಹಾಗೂ 2024ನೇ ಸಾಲಿನ ಬೆಂಗಳೂರಿನ ವಿಜಯನಗರ ನಿವಾಸಿ ಶಶಿ ತರೀಕೆರೆ ಅವರು ಪುರಸ್ಕೃತರಾಗಿದ್ದಾರೆ ಎಂದು ಜಿಲ್ಲಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ದಲಿತ ಸೇನೆ ಚಡಚಣ ತಾಲೂಕು ನೂತನ ಪದಾಧಿಕಾರಿಗಳ ಆಯ್ಕೆ। ಮಹಾದೇವ ಬನಸೋಡೆ ಕರೆ

# ಸಮಾಜಮುಖಿ ಕಾರ್ಯಕ್ಕೆ ಒತ್ತು ನೀಡಿ; ಶೋಷಿತರ ಪರ ಧ್ವನಿ ಎತ್ತಿ

■ ಉದಯರಶ್ಮಿ ದಿನಪತ್ರಿಕೆ



ಚಡಚಣ: ತಾಲೂಕಿನ ಶೋಷಿತರು, ನೊಂದವರು ಹಾಗೂ ಸಮಾಜದ ವಂಚಿತ ವರ್ಗಗಳ ಧ್ವನಿಯಾಗಿ ಕಾರ್ಯನಿರ್ವಹಿಸುವ ಸಂಕಲ್ಪದೊಂದಿಗೆ ದಲಿತ ಸೇನೆ ಚಡಚಣ ತಾಲೂಕು ಘಟಕದ ನೂತನ ಪದಾಧಿಕಾರಿಗಳನ್ನು ಸರ್ವಾನುಮತದಿಂದ ಆಯ್ಕೆ ಮಾಡಲಾಯಿತು.

ದಲಿತ ಸೇನೆ ರಾಜ್ಯಾಧ್ಯಕ್ಷ ಹಣಮಂತ ಯಳಸಂಗಿ ಅವರ ಆದೇಶದ ಮೇರೆಗೆ ಹಾಗೂ ವಿಜಯಪುರ ಜಿಲ್ಲಾಧ್ಯಕ್ಷ ಖಾಜು ಹೊಸಮನಿ ಅವರ ನೇತೃತ್ವದಲ್ಲಿ ಚಡಚಣ ನಗರದ ಪ್ರವಾಸಿ ಮಂದಿರದಲ್ಲಿ ಆಯೋಜಿಸಿದ್ದ ವಿಶೇಷ ಸಭೆಯಲ್ಲಿ ಗುರುವಾರ ನೂತನ ಪದಾಧಿಕಾರಿಗಳ ಆಯ್ಕೆ ಪ್ರಕ್ರಿಯೆ ನಡೆಯಿತು.

ಸಭೆಯಲ್ಲಿ ಮುಖ್ಯ ಅತಿಥಿಯಾಗಿ ಪಾಲ್ಗೊಂಡು ಮಾತನಾಡಿದಹಿರಿಯಮುಖಂಡಮಹಾದೇವಬನಸೋಡೆ, ಸಂಘಟನೆಯಲ್ಲಿ ಜವಾಬ್ದಾರಿ ವಹಿಸಿಕೊಂಡವರು ಹುದ್ದೆಗೆ ಮಾತ್ರ ಸೀಮಿತರಾಗದೆ ಸಮಾಜಮುಖಿ ಕಾರ್ಯಗಳಲ್ಲಿ ಸಕ್ರಿಯವಾಗಿ ತೊಡಗಿಸಿಕೊಳ್ಳಬೇಕು ಎಂದು ಕರೆ ನೀಡಿದರು.

ನೊಂದವರು ಹಾಗೂ ತುಳಿತಕ್ಕೊಳಗಾದವರ ಪರವಾಗಿ ನಿರಂತರ ಹೋರಾಟ ನಡೆಸುವ ಮನೋಭಾವ ಬೆಳೆಸಿಕೊಳ್ಳಬೇಕು. ಜಾತಿ, ಧರ್ಮದ ಭೇದವಿಲ್ಲದೆ ಎಲ್ಲರನ್ನು ಸಮಾನವಾಗಿ ಕಾಣುವ ಮೂಲಕ ಸಮಾಜದಲ್ಲಿ ಸೌಹಾರ್ದತೆ ಮತ್ತು ಸಹೋದರತ್ವವನ್ನು ಬಲಪಡಿಸಬೇಕು ಎಂದು ಸಲಹೆ ನೀಡಿದರು.

ಜಿಲ್ಲಾಧ್ಯಕ್ಷ ಖಾಜು ಹೊಸಮನಿ ಮಾತನಾಡಿ, ಚಡಚಣ ತಾಲೂಕಿನಲ್ಲಿ ದಲಿತ ಸೇನೆಯು ಜನಪರ ಮತ್ತು ಪ್ರಗತಿಪರ ಹೋರಾಟಗಳಲ್ಲಿ ಮುಂಚೂಣಿಯಲ್ಲಿರಬೇಕು ಎಂದರು. ಸಂಘಟನೆಯ ಹೆಸರನ್ನು ವೈಯಕ್ತಿಕ ಸ್ವಾರ್ಥಕ್ಕಾಗಿ ಬಳಸಿಕೊಳ್ಳದೆ, ಸಮಾಜದಲ್ಲಿ ಅನ್ಯಾಯಕ್ಕೊಳಗಾದವರಿಗೆ ನ್ಯಾಯ ದೊರಕಿಸುವ ನಿಟ್ಟಿನಲ್ಲಿ ಪ್ರಾಮಾಣಿಕವಾಗಿ ಕಾರ್ಯನಿರ್ವಹಿಸಬೇಕು. ಸಂಘಟನೆಯ ಶಿಸ್ತು, ಘನತೆ ಮತ್ತು ವಿಶ್ವಾಸಾರ್ಹತೆಯನ್ನು ಕಾಪಾಡುವುದು ಪ್ರತಿಯೊಬ್ಬ ಪದಾಧಿಕಾರಿಯ ಜವಾಬ್ದಾರಿಯಾಗಿದೆ ಎಂದು ಹೇಳಿದರು.

ಈ ವೇಳೆ ತಾಲೂಕು ಅಧ್ಯಕ್ಷ ರಮೇಶ ಬೆಳ್ಳೆನವರ ನೂತನ ಪದಾಧಿಕಾರಿಗಳ ಪಟ್ಟಿಯನ್ನು ಪ್ರಕಟಿಸಿದರು. ಗೌರವಾಧ್ಯಕ್ಷರಾಗಿದ್ಯಾಮಗೊಂಡಕಾಂಬಳೆ,ಉಪಾಧ್ಯಕ್ಷರಾಗಿ ಚೆನ್ನಪ್ಪ ಕಾಂಬಳೆ,ಪ್ರಧಾನ ಕಾರ್ಯದರ್ಶಿಯಾಗಿ ಭಗವಾನ ಬುದ್ಧ ಬನಸೋಡೆ,ಕಾರ್ಯದರ್ಶಿಗಳು: ಸದಾಶಿವ ಕಾಂಬಳೆ, ಸದಾಶಿವ ಹೊಸಮನಿ,ಸಂಘಟನಾ ಸಂಚಾಲಕರು: ಅನಿಲ ಸರತಾಪೆ, ಗಿರೀಶ ಬನಸೋಡೆ, ನಗರ ಘಟಕ ಅಧ್ಯಕ್ಷ: ಸಂದೇಶ ಬನಸೋಡೆ ಎಂದು ಘೋಷಿಸಿದರು.

ನೂತನವಾಗಿ ಆಯ್ಕೆಯಾದ ಎಲ್ಲಾ ಪದಾಧಿಕಾರಿಗಳಿಗೆ ಶಾಲು ಹೊದಿಸಿ, ಹೂಗುಚ್ಛ ನೀಡಿ ಆತ್ಮೀಯವಾಗಿ ಸನ್ಮಾನಿಸಲಾಯಿತು.

ಸಭೆಯಲ್ಲಿ ಮುಂಬರುವ ದಿನಗಳಲ್ಲಿ ತಾಲೂಕಿನ ಹಳ್ಳಿ–ಹಳ್ಳಿಗಳಿಗೆ ಭೇಟಿ ನೀಡಿ ಸಂಘಟನೆಯನ್ನು ತಳಮಟ್ಟದಿಂದ ಬಲಪಡಿಸುವುದು, ಜನಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವುದು ಹಾಗೂ ಸಮಾಜದ ಸಮಸ್ಯೆಗಳ ಪರಿಹಾರಕ್ಕಾಗಿ ಹೋರಾಟವನ್ನು ಮತ್ತಷ್ಟು ತೀವ್ರಗೊಳಿಸುವ ಕುರಿತು ಒಮ್ಮತದ ನಿರ್ಣಯ ಕೈಗೊಳ್ಳಲಾಯಿತು.

ಈ ಸಂದರ್ಭದಲ್ಲಿ ಬಸವ ಸಮಿತಿ ಅಧ್ಯಕ್ಷ ಮುರುಘೇಂದ್ರ ಸಿಂಪಿ, ಚಂದ್ರಾಮ ಮೇಲಿನಕೇರಿ, ಯಲ್ಲಪ್ಪ ತಳಕೇರಿ ಸೇರಿದಂತೆ ಸಂಘಟನೆಯ ಅನೇಕ ಮುಖಂಡರು, ಕಾರ್ಯಕರ್ತರು ಹಾಗೂ ಪದಾಧಿಕಾರಿಗಳು ಉಪಸ್ಥಿತರಿದ್ದರು.

# ಯುವಕರು ದುಶ್ಚಟಗಳಿಂದ ದೂರವಿರಿ :ಶಶಿಕಾಂತ ಪತ್ತಾರ

■ ಉದಯರಶ್ಮಿ ದಿನಪತ್ರಿಕೆ

ಅಫಜಲಪುರ: ದೇಶದ ಶಕ್ತಿಯಾಗಲಿರುವ ಯುವ ಜನತೆ ದುಶ್ಚಟಗಳಿಂದ ದೂರವಿದ್ದು ದೇಶದ ಪ್ರಗತಿಗೆ ಆಸರೆಯಾಗಬೇಕು ಎಂದು ಮದರ್ ತೆರೆಸಾ ಪಿಯು ಕಾಲೇಜಿನ ಪ್ರಾಚಾರ್ಯ ಶಶಿಕಾಂತ ಪತ್ತಾರ ಹೇಳಿದರು. ಪಟ್ಟಣದ ಮದರ್ ತೆರೆಸಾ ಪದವಿ ಪೂರ್ವ ಕಾಲೇಜಿನಲ್ಲಿ ತಂಬಾಕು ಮುಕ್ತ ಜಾಗೃತಿ ಹಾಗೂ ಪ್ರತಿಜ್ಞಾ ವಿಧಿ ಕಾರ್ಯಕ್ರಮದಲ್ಲಿ ವಿದ್ಯಾರ್ಥಿಗಳಿಗೆ ತಂಬಾಕು ಮುಕ್ತ ಪ್ರತಿಜ್ಞೆ ಬೋಧಿಸಿದ ಬಳಿಕ ಮಾತನಾಡಿದ ಅವರು, ತಂಬಾಕು ಸೇವನೆ ಮಾಡುವುದರಿಂದ ಆರೋಗ್ಯದ ಮೇಲೆ ಅಡ್ಡ ಪರಿಣಾಮಗಳು ಬೀರುತ್ತವೆ. ಜೊತೆಗೆ ಕ್ಯಾನ್ಸರ್, ಹೃದಯ ಸಂಬಂಧಿ ಕಾಯಿಲೆಗಳು ಹಾಗೂ ಉಸಿರಾಟದ ಸಮಸ್ಯೆಗಳಂತಹ ಮಾರಕ ರೋಗಗಳಿಗೆ ಕಾರಣವಾಗುತ್ತದೆ. ವಿದ್ಯಾರ್ಥಿ ಜೀವನವು ಭವಿಷ್ಯ ರೂಪಿಸುವ ಅಮೂಲ್ಯ ಹಂತವಾಗಿದ್ದು, ಯಾವುದೇ ದುಶ್ಚಟಗಳಿಗೆ ಬಲಿಯಾಗದೆ ಆರೋಗ್ಯಕರ ಜೀವನವನ್ನು ಅಳವಡಿಸಿಕೊಳ್ಳಬೇಕು ಎಂದು ಸಲಹೆ ನೀಡಿದರು. ಇಂದಿನ ಯುವಜನರು ಸ್ನೇಹಿತರ ಒತ್ತಡಕ್ಕೆ ತಂಬಾಕು ಸೇವನೆಗೆ ಒಳಗಾಗುವ ಸಂಭವ ಹೆಚ್ಚಿದೆ. ಆದ್ದರಿಂದ ವಿದ್ಯಾರ್ಥಿಗಳು ಉತ್ತಮ ಅಭ್ಯಾಸಗಳನ್ನು ರೂಢಿಸಿಕೊಳ್ಳುವುದರೊಂದಿಗೆ ಕುಟುಂಬ ಮತ್ತು ಸಮಾಜದಲ್ಲಿಯೂ ತಂಬಾಕು ಸೇವನೆಯ ದುಷ್ಪರಿಣಾಮಗಳ ಬಗ್ಗೆ ಜಾಗೃತಿ ಮೂಡಿಸಬೇಕು ಎಂದು ಹೇಳಿದ ಅವರು ತಂಬಾಕು ಮುಕ್ತ ಸಮಾಜ ನಿರ್ಮಾಣಕ್ಕಾಗಿ ಪ್ರತಿಯೊಬ್ಬರೂ ಸಂಕಲ್ಪ ಮಾಡಬೇಕು. ತಾವು ತಂಬಾಕಿನಿಂದ ದೂರವಿರುವುದರ ಜೊತೆಗೆ ಇತರರನ್ನೂ ದುಶ್ಚಟಗಳಿಂದ ದೂರವಿಡಲು ಪ್ರೇರೇಪಿಸಬೇಕು ಎಂದು ಕರೆ ನೀಡಿದರು. ಈ ಸಂದರ್ಭದಲ್ಲಿ ಸಿಬ್ಬಂದಿಗಳಾದ ಶಿವಲೀಲಾ ಪಾಟೀಲ, ಪ್ರಶಾಂತ ಅಂಜುಟಗಿ, ವಿಶ್ವನಾಥ ಸಿಂಪಿ, ಅಂಬುಜಾ ಡಾಂಗೆ, ಶಿವಾನಂದ ಮುಗಳಿ ಸೇರಿದಂತೆ ಕಾಲೇಜಿನ ಬೋಧಕ ಹಾಗೂ ಬೋಧಕೇತರ ಸಿಬ್ಬಂದಿ ಮತ್ತು ವಿದ್ಯಾರ್ಥಿಗಳು ಉಪಸ್ಥಿತರಿದ್ದರು. ಕಾರ್ಯಕ್ರಮದಲ್ಲಿ ಎಲ್ಲ ವಿದ್ಯಾರ್ಥಿಗಳು ತಂಬಾಕು ಸೇವನೆ ಮಾಡದಿರಲು ಹಾಗೂ ಇತರರಿಗೂ ಅದರ ದುಷ್ಪರಿಣಾಮಗಳ ಬಗ್ಗೆ ಅರಿವು ಮೂಡಿಸಲು ಪ್ರತಿಜ್ಞೆ ಸ್ವೀಕರಿಸಿದರು.

## ವಿಜಯಪುರದಲ್ಲಿ ರಾಷ್ಟ್ರೀಯ ಬಂಜಾರ ಪರಿಷತ್ ಅಧ್ಯಕ್ಷ ಪ್ರಕಾಶ ಬಾಳು ಚವ್ಹಾಣ ಮಾಹಿತಿ

# ಜು.18–19 ಕ್ಕೆ ಅಂಬಾ ಭವಾನಿ ಜಾತ್ರಾ ಮಹೋತ್ಸವ

■ ಉದಯರಶ್ಮಿ ದಿನಪತ್ರಿಕೆ



ವಿಜಯಪುರ: ನಗರದ ಪ್ರಸಿದ್ಧ ಶ್ರೀ ಅಂಬಾ ಭವಾನಿ ವಾರ್ಷಿಕ ಜಾತ್ರಾ ಮಹೋತ್ಸವವು ಜುಲೈ 18 ಹಾಗೂ 19 ರಂದು ಭಕ್ತಿ, ಶ್ರದ್ಧೆ ಮತ್ತು ಸಂಭ್ರಮದಿಂದ ನಡೆಯಲಿದ್ದು, ಜಾತ್ರೆಯ ಎಲ್ಲಾ ಸಿದ್ಧತೆಗಳನ್ನು ಪೂರ್ಣಗೊಳಿಸಲಾಗಿದೆ ಎಂದು ರಾಷ್ಟ್ರೀಯ ಬಂಜಾರ ಪರಿಷದ ಅಧ್ಯಕ್ಷ ಪ್ರಕಾಶ ಬಾಳು ಚವ್ಹಾಣ ಪತ್ರಿಕಾಗೋಷ್ಠಿಯಲ್ಲಿ ತಿಳಿಸಿದರು.

ಅವರು ಮಾತನಾಡಿ, ಜುಲೈ 18ರಂದು ಬೆಳಿಗ್ಗೆ 9.00 ಗಂಟೆಗೆ ಸೋಲಾಪುರ ರಸ್ತೆಯಲ್ಲಿರುವ ಮರಗಟ್ಟೆ ಓಣಿಯಿಂದ ಶ್ರೀ ಅಂಬಾ ಭವಾನಿ ದೇವಿಯ ಮೂರ್ತಿಯ ಭವ್ಯ ಮೆರವಣಿಗೆ ನಡೆಯಲಿದೆ. ಮೆರವಣಿಗೆಯಲ್ಲಿ ಬಂಜಾರ ಸಂಸ್ಕೃತಿಯನ್ನು ಪ್ರತಿಬಿಂಬಿಸುವ ಡೊಳ್ಳು–ತಾಶಾ, ಸಾಂಪ್ರದಾಯಿಕ ನೃತ್ಯಗಳು, 501 ಮಹಿಳೆಯರಿಂದ ಪೂರ್ಣಕುಂಭ ಸ್ವಾಗತ, ಗೊಂಬೆ ಕುಣಿತ ಸೇರಿದಂತೆ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಲಿವೆ ಎಂದು ಹೇಳಿದರು.

ಜುಲೈ 19ರಂದು ಸಂಜೆ 6.00 ಗಂಟೆಗೆ ಜಾತ್ರಾ ಮಹೋತ್ಸವದ ಅಂಗವಾಗಿ ಧಾರ್ಮಿಕ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆಯಲಿದ್ದು, ವಿವಿಧ ಕ್ಷೇತ್ರಗಳ ಗಣ್ಯರು ಭಾಗವಹಿಸಲಿದ್ದಾರೆ. ರಾಜ್ಯದ ವಿವಿಧ ಜಿಲ್ಲೆಗಳು ಹಾಗೂ ನೆರೆಯ ರಾಜ್ಯಗಳಿಂದ ಸಾವಿರಾರು ಭಕ್ತರು ಆಗಮಿಸುವ ನಿರೀಕ್ಷೆಯಿದ್ದು, ಭಕ್ತರಿಗೆ ಅಗತ್ಯ ಮೂಲಸೌಕರ್ಯ ಹಾಗೂ ಭದ್ರತಾ ವ್ಯವಸ್ಥೆಗಳನ್ನು ಕಲ್ಪಿಸಲಾಗಿದೆ ಎಂದು ಪ್ರಕಾಶ ಬಾಳು ಚವ್ಹಾಣ ತಿಳಿಸಿದರು.

ಶ್ರೀ ಅಂಬಾ ಭವಾನಿ ತಾಯಿಯ ಕೃಪೆಗೆ ಪಾತ್ರರಾಗಲು ಜಾತ್ರಾ ಮಹೋತ್ಸವದಲ್ಲಿ ಸಾರ್ವಜನಿಕರು, ಭಕ್ತಾದಿಗಳು ಹಾಗೂ ಬಂಜಾರ ಸಮಾಜದ ಬಂಧುಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸುವಂತೆ ರಾಷ್ಟ್ರೀಯ ಬಂಜಾರ ಪರಿಷದ ಅಧ್ಯಕ್ಷ ಪ್ರಕಾಶ ಬಾಳು ಚವ್ಹಾಣ ಮನವಿ ಮಾಡಿದರು.

ಪತ್ರಿಕಾಗೋಷ್ಠಿಯಲ್ಲಿ ಸಮಾಜದ ಮುಖಂಡರು, ಪದಾಧಿಕಾರಿಗಳು ಹಾಗೂ ಜಾತ್ರಾ ಮಹೋತ್ಸವ ಸಮಿತಿಯ ಸದಸ್ಯರು ಉಪಸ್ಥಿತರಿದ್ದರು.

# ರಾಜ್ಯದಲ್ಲಿ ಕ್ಷೀಣಿಸಿದ ಮುಂಗಾರು, ಬರದ ಮುನ್ಸೂಚನೆ

## ಬೆಳೆ ವಿಮೆ ಮಾಡಿಸಿಕೊಳ್ಳುವಂತೆ ಕೃಷಿ ಇಲಾಖೆಯ ಪ್ರಸಾದ್ ಮನವಿ

■ ಉದಯರಶ್ಮಿ ದಿನಪತ್ರಿಕೆ

ವರದಿ: ಶ್ರೀಕಂಠ ಈಶ್ವರ್

ಎಚ್ ಡಿ ಕೋಟೆ: ತಾಲೂಕಿನ ಹಲವು ಭಾಗಗಳಲ್ಲಿ ತೀವ್ರ ಮಳೆ ಕೊರತೆಯಿಂದಾಗಿ ಬರಗಾಲದ ಛಾಯೆ ಆವರಿಸಿದೆ. ಈ ಬಾರಿ ಮುಂಗಾರು ಮಳೆ ಕೈಕೊಟ್ಟಿರುವ ಹಿನ್ನೆಲೆಯಲ್ಲಿ ಬೆಳೆಗಳು ಒಣಗುತ್ತಿದ್ದು, ಕೊಳವೆ ಬಾವಿಗಳು ಕೂಡ ಬರಿದಾಗಿವೆ. ಮುಸುಕಿನ ಜೋಳ ಒಣಗುತ್ತಿದ್ದು, ಹತ್ತಿ ಬೆಳೆಯಲ್ಲಿ ಯಾವುದೇ ಬೆಳವಣಿಗೆ ಕೂಡ ಕಂಡುಬರುತ್ತಿಲ್ಲ. ಇನ್ನು ಹೊಗೆಸೊಪ್ಪು ಕೂಡ ಬೆಳೆಯದೆ ಇರುವುದರಿಂದ ರೈತರು ಆತಂಕಗೊಂಡಿದ್ದಾರೆ. ಇನ್ನುಸುರಿಯುತ್ತಿರುವ ಇಬ್ಬನಿಗೆ ಬೆಳೆಗಳು ನಾಶವಾಗುತ್ತಿದ್ದು, ಅನ್ನದಾತನಿಗೆ ದಿಕ್ಕೆತೋಚದಂತಾಗಿದೆ.

ತಾಲೂಕಿನಲ್ಲಿ ಈ ತಿಂಗಳಲ್ಲಿ ಇಲ್ಲಿಯವರಿಗೆ ಕೇವಲ ನಾಲ್ಕರಿಂದ ಐದು ದಿನಗಳು ಮಾತ್ರ ಸಾಧಾರಣ ಮಳೆಯಾಗಿದ್ದರೆ, ಬೀಚನಹಳ್ಳಿ, ಆಲನಹಳ್ಳಿಯಲ್ಲಿ ಒಂದು ಹನಿ ಕೂಡ ಮಳೆ ಧರೆಗೆ ಬಿದ್ದಿಲ್ಲ. ಹೀಗಾಗಿ ರೈತರು ಕಷ್ಟಪಟ್ಟು ಬೆಳೆದಿದ್ದ ಬೆಳೆಗಳು ನೀರಿಲ್ಲದೆ ಒಣಗುತ್ತಿದ್ದು, ಅನ್ನದಾತ ಆಕಾಶ ನೋಡುವಂತಾಗಿದೆ. ಜೂನ್ ತಿಂಗಳಲ್ಲಿ ವಾಡಿಕೆಗಿಂತ ಶೇ. 52 ರಷ್ಟು ಕಡಿಮೆ ಮಳೆಯಾಗಿರುವುದರಿಂದ ಬಹುತೇಕ ಕಡೆ ರೈತರು ಇನ್ನು ಬಿತ್ತನೆ ಬೀಜವನ್ನೇ ಮಾಡಿಲ್ಲ. ಜಮೀನು ಹದಮಾಡಿಕೊಂಡು, ಬಿತ್ತನೆ ಬೀಜ ಮನೆಯಲ್ಲಿಟ್ಟುಕೊಂಡು ವರುಣನ ಆಗಮನಕ್ಕಾಗಿ ಎದುರು ನೋಡುತ್ತಿದ್ದಾರೆ.

ಜುಲೈ ತಿಂಗಳಿಗೆ ಅಂದಾಜು 398 ಮಿಲಿ ಮೀಟರ್ ನಷ್ಟು ವಾಡಿಕೆ ಮಳೆಯಾಗಬೇಕಾಗಿತ್ತು. ಆದರೆ ಕೇವಲ 211 ಮಿಲಿ ಮೀಟರ್ ನಷ್ಟು ಮಳೆಯಾಗಿದ್ದು, ಈ ವರ್ಷ ಶೇ.47ರಷ್ಟು ಮಳೆ ಕೊರತೆ ಉಂಟಾಗಿದೆ. ಕಳೆದ ವರ್ಷ ಇಲ್ಲಿಯವರೆಗೆ ಅಂದಾಜು 600 ಮಿಲಿ ಮೀಟರ್ ಗಿಂತ ಹೆಚ್ಚು ಮಳೆಯಾಗಿ ತಾಲೂಕಿನ ಬಹುತೇಕ ಜಲಾಶಯಗಳು ಭರ್ತಿಯಾಗಿದ್ದವು, ಆದರೆ ಈ ಬಾರಿ ಮಳೆ ಕೊರತೆಯಿಂದ ತಾಲೂಕಿನ ರೈತರ ಜೀವನಾಡಿಯಾಗಿರುವ ಕಪಿಲಾ ಒಡಲು ಮತ್ತೆ ಬರಿದಾಗುವ ಸ್ಥಿತಿಗೆ ತಲುಪಿದೆ. ತಾಲೂಕಿನಲ್ಲಿ ಪೂರ್ವ ಮುಂಗಾರು ಮಳೆಗೆ 60,927 ಹೆಕ್ಟೇರ್ ಪ್ರದೇಶದಲ್ಲಿ ಬೆಳೆ ಬೆಳೆಯಲಾಗುತ್ತಿತ್ತು. ಆದರೆ ಈ ಸಲ 34,434 ಹೆಕ್ಟೇರ್ ಪ್ರದೇಶದಲ್ಲಿ ಮಾತ್ರ ಬೆಳೆಗಳನ್ನು ಬೆಳೆಯಲಾಗಿದೆ.



### ರೈತರು ಬೆಳೆವಿಮೆ ಮಾಡಿಸಿಕೊಳ್ಳಲು ಸಲಹೆ

ಕೃಷಿ ಇಲಾಖೆಯ ಮಾಹಿತಿ ಪ್ರಕಾರ ತಾಲೂಕಿನಲ್ಲಿ 25000 ಹೆಕ್ಟೇರ್ ಪ್ರದೇಶದಲ್ಲಿ ಮುಸುಕಿನ ಜೋಳ, 5150 ಹೆಕ್ಟೇರ್ ಪ್ರದೇಶದಲ್ಲಿ ಹೊಗೆ ಸೊಪ್ಪು, 3070 ಹೆಕ್ಟೇರ್ ಪ್ರದೇಶದಲ್ಲಿ ಹತ್ತಿ,1350 ಹೆಕ್ಟೇರ್ ಪ್ರದೇಶದಲ್ಲಿ ಅಲಸಂದೆ,150 ಹೆಕ್ಟೇರ್ ಪ್ರದೇಶದಲ್ಲಿ ಉದ್ದು, 200 ಹೆಕ್ಟೇರ್ ಪ್ರದೇಶದಲ್ಲಿ ರಾಗಿ, 100 ಹೆಕ್ಟೇರ್ ಪ್ರದೇಶದಲ್ಲಿ ತೊಗರಿ,150 ಹೆಕ್ಟೇರ್ ಪ್ರದೇಶದಲ್ಲಿ ಹೆಸರು ಬೆಳೆಯಲಾಗಿದೆ ಅಷ್ಟೇ. ವಾರದ ಹಿಂದೆ ಸುರಿಯುತ್ತಿದ್ದ ಮಳೆ ಇದೀಗ ಕಡಿಮೆಯಾಗಿತ್ತಾ ಬಂದಿದ್ದು, ಬಿಸಿಲಿನ ಝಳ ಹೆಚ್ಚಾಗಿದೆ. ಹೀಗಾಗಿ ರೈತರು ಎಚ್ಚರಿಕೆಯಿಂದ ವ್ಯವಸಾಯ ಮಾಡಬೇಕಾಗಿದೆ. ಹವಾಮಾನ ಶಾಸ್ತ್ರಜ್ಞರ ಪ್ರಕಾರ ಭಾರತದ ಹವಾಮಾನ ಮೇಲೆ ಎಲ್ ನಿನೋ ಪ್ರಭಾವ ಬೀರಿದ್ದು, ಶುಷ್ಕ ವಾತಾವರಣ ನಿರ್ಮಾಣವಾಗುವ ಸಾಧ್ಯತೆಯಿರುವುದಾಗಿ ಎಚ್ಚರಿಕೆ ನೀಡಿದ್ದಾರೆ. ಹೀಗಾಗಿ ಮಿಶ್ರ ಬೇಸಾಯದ ಜೊತೆಗೆ ವೈಜ್ಞಾನಿಕ ರೀತಿಯಲ್ಲಿ ಬೇಸಾಯ ಪದ್ಧತಿ ಅಳವಡಿಸಿಕೊಂಡು, ಬೆಳೆ ವಿಮೆ ಮಾಡಿಸಿಕೊಳ್ಳುವುದರ ಮೂಲಕ ಬೆಳೆಹಾನಿಯಿಂದ ಕೊಂಚ ಮಟ್ಟಿಗೆ ಪಾರಾಗಬೇಕಾಗಿದೆ.

"ಮುಸುಕಿನ ಜೋಳ ಬೆಳೆಯುವ ರೈತರು ಬೆಳೆಗೆ ವಿಮೆ ಮಾಡಿಸಲು ಈ ತಿಂಗಳ 31ನೇ ತಾರೀಕು ಕೊನೆಯ ದಿನಾಂಕವಾಗಿದ್ದು ರೈತರು ತಾವುಗಳು ಫಸಲು ವಿಮಾ ಯೋಜನೆಯನ್ನು ಗ್ರಾಮ ಒನ್ ಸೆಂಟರ್, ಸಾಮಾನ್ಯ ನಾಗರಿಕ ಸೇವಾ ಕೇಂದ್ರ, ಅಥವಾ ತಾವು ಖಾತೆದಾರರಾಗಿರುವ ಬ್ಯಾಂಕ್ ಶಾಖೆಗಳ ಮೂಲಕ ವಿಮೆ ಯೋಜನೆಯನ್ನು ಮಾಡಿಸಿ ಬೆಳೆ ನಷ್ಟದಿಂದ ಪಾರಾಗಬಹುದಾಗಿದೆ."

■ ಪ್ರಸಾದ್ ಕೃಷಿ ಇಲಾಖೆ ಸಹಾಯಕ ನಿರ್ದೇಶಕರು

**Printed by:** AVINASH BIDARI, **Published and owned by:** SHAILA INDUSHEKHAR MANUR **Printed at:** ARUN OFFSET PRINTERS,No.23, Sanjaygandhi Nagar, Indi Road, Vijayapura - 586101, Vijayapura Dist., Karnataka. **Published at:** At No.14, Silk City, Near Varasiddi Vinayaka Temple, Atalatti Link Road, Vijayapura -586102, Vijayapura Dist., Karnataka..**Editor :** INDUSHEKHAR MANUR